ಮಂಗಳವಾರ 25.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 108
Digital Varthe Kannada Daily
Volume 01 - Issue 108
Tuesday 25.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE

digitalvarthe@gmail.com
www.digitalvarthe.com

## ಯುವತಿಯನ್ನ ಸ್ನೇಹಿತೆ ರೂಂಗೆ ಕರೆದೊಯ್ದು ಕೊಲೆಗೈದ ಯುವಕ




**ನೆಲಮಂಗಲ:** ಯುವತಿಯನ್ನ ಸ್ನೇಹಿತೆ ರೂಂಗೆ ಕರೆದೊಯ್ದು ಯುವಕ ಕೊಲೆಗೈದಿರುವ ಘಟನೆ ಬೆಂಗಳೂರು ಉತ್ತರ ತಾಲೂಕಿನ ತಮ್ಮೇನಹಳ್ಳಿಯಲ್ಲಿ ನಡೆದಿದೆ. ದೇವಿಶ್ರೀ (21) ಮೃತ ಯುವತಿ. ಮೂಲತಃ ಆಂಧ್ರದ ಅನ್ನಮಯ್ಯ ಜಿಲ್ಲೆಯ ಚಿಕ್ಕಿಂವರೀಪಲ್ಲಿ ಗ್ರಾಮದ ನಿವಾಸಿಯಾಗಿರುವ ದೇವಿಶ್ರೀ ಕಳೆದ ಮೂರು ವರ್ಷಗಳಿಂದ ಬೆಂಗಳೂರಿನಲ್ಲಿ ವ್ಯಾಸಂಗ ಮಾಡುತ್ತಿದ್ದಳು.

ಬೆಂಗಳೂರಿನ ಪ್ರತಿಷ್ಠಿತ ಕಾಲೇಜೊಂದರಲ್ಲಿ ಬಿಬಿಎಂ ವ್ಯಾಸಂಗ ಮಾಡುತ್ತಿದ್ದ ದೇವಿಶ್ರೀ ಭಾನುವಾರ ಬೆಳಗ್ಗೆ ಪ್ರೇಮ್ ವರ್ಧನ್ ಎಂಬಾತನ ಜೊತೆ ಸ್ನೇಹಿತೆ ರೂಂಗೆ ತೆರಳಿದ್ದಳು.


ಅಲ್ಲಿ ಆಕೆಯನ್ನು ಕೊಲೆ ಮಾಡಿ ಯುವಕ ಓರ್ವನೇ ವಾಪಸ್ ಆಗಿದ್ದಾನೆ. ಇಂದು ಬೆಳಗ್ಗೆ ಘಟನೆ ಬೆಳಕಿಗೆ ಬಂದಿದೆಮೃತ ದೇವಿಶ್ರೀ ರೆಡ್ಡಪ್ಪ, ಜಗದಂಭ ದಂಪತಿಯ ಕೊನೆಯ ಮಗಳು. ಚೆನ್ನಾಗಿ ಓದಲಿ ಅಂತಾ ಪೋಷಕರು ಬೆಂಗಳೂರಿನ ಪ್ರತಿಷ್ಠಿತ ಕಾಲೇಜಿಗೆ ಸೇರಿಸಿದ್ದರು. ಘಟನೆ ಸಂಬಂಧ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ. ತಲೆಮರೆಸಿಕೊಂಡಿರುವ ಪ್ರೇಮ್ ವರ್ಧನ್‌ಗೆ ಪೊಲೀಸರು ತಲಾಶ್ ನಡೆಸುತ್ತಿದ್ದಾರೆ. ಸದ್ಯ ಯುವತಿಯ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಿದ್ದು, ಆಸ್ಪತ್ರೆಯ ಶವಗಾರದ ಮುಂದೆ ಕುಟುಂಬಸ್ಥರು ಸೇರಿದ್ದಾರೆ

ಈ ಕುರಿತು ದೇವಿಶ್ರೀ ದೊಡ್ಡಮ್ಮ ಮಾತನಾಡಿ, ಮಗಳು ಇಲ್ಲಿಗೆ ಓದಲಿಕ್ಕೆ ಬಂದಿದ್ದಾಳೆ. ಭಾನುವಾರ ಬೆಳಗ್ಗೆ 11 ಗಂಟೆಗೆ ತಂದೆಯೊಂದಿಗೆ ಮಾತಾನಾಡಿದ್ದಾಳೆ. ಆಮೇಲೆ ಕಾಲ್ ಮಾಡಿದ್ರೂ ಫೋನ್ ಪಿಕ್ ಮಾಡಿಲ್ಲ. ಅವಳ ಸ್ನೇಹಿತೆ ಕರೆ ಮಾಡಿ ಅವರ ರೂಂಗೆ ಕರೆಸಿಕೊಂಡಿದ್ದಾರೆ.

ಅಲ್ಲಿ ಏನಾಗಿದೆ ಗೊತ್ತಿಲ್ಲ. ನಮ್ಮ ಮಗಳ ಸಾವಿಗೆ ನ್ಯಾಯ ಸಿಗಬೇಕು ಎಂದು ಆಗ್ರಹಿಸಿದ್ದಾರೆ

ಇನ್ನು ಈ ಬಗ್ಗೆ ದೇವಿಶ್ರೀ ದೊಡ್ಡಪ್ಪ ಪ್ರತಿಕ್ರಿಯಿಸಿ, ಯುವಕ ರ್‍ಯಾಗಿಂಗ್ ಮಾಡುತ್ತಿದ್ದ ಬಗ್ಗೆ ದೇವಿಶ್ರೀ ಕಾಲೇಜಿಗೆ ಮತ್ತು ಪೋಷಕರಿಗೂ ತಿಳಿಸಿದ್ದಳು. ಮೂರು ತಿಂಗಳ ಹಿಂದೆಯೇ ಯುವಕನ ಉಪಟಳದ ಬಗ್ಗೆ ತಿಳಿಸಿದ್ದಳು. ಕಾಲೇಜಿನವರು ಯಾವುದೇ ಕ್ರಮ ಕೈಗೊಂಡಿಲ್ಲ. ಪೋಷಕರು ಇನ್ನೂ ಮೂರು ತಿಂಗಳು ಕಾಲೇಜು ಮುಗಿಯುತ್ತೆ ಅಂತಾ ಮಗಳಿಗೆ ಹೇಳಿದ್ದರು ಎಂದು ತಿಳಿಸಿದ್ದಾರೆ.

## ನಾಲೆಯಲ್ಲಿ ಬಟ್ಟೆ ತೊಳೆಯಲು ಹೋಗಿದ್ದ ದಂಪತಿ ನೀರುಪಾಲು




**ಹಾಸನ:** ನಾಲೆಯಲ್ಲಿ ಬಟ್ಟೆ ತೊಳೆಯಲು ಹೋಗಿದ್ದ ದಂಪತಿ ನೀರುಪಾಲಾದ ಘಟನೆ ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲೂಕಿನ ನಂಬಿಹಳ್ಳಿ ಗ್ರಾಮದಲ್ಲಿ ನಡೆದಿದೆ. ಗೋಪಾಲ್ (27), ದೀಪು (24) ಮೃತ ದಂಪತಿ. ಭಾನುವಾರ ದಂಪತಿ ಹೇಮಾವತಿ ನಾಲೆಯಲ್ಲಿ ಬಟ್ಟೆ ತೊಳೆಯಲು ತೆರಳಿದ್ದರು. ಬಟ್ಟೆ ತೊಳೆಯುವಾಗ ದೀಪು ಕಾಲು ಜಾರಿ ನಾಲೆಗೆ ಬಿದ್ದಿದ್ದಾಳೆ. ಪತ್ನಿಯನ್ನು ರಕ್ಷಿಸಲು ಪತಿ ಗೋಪಾಲ್ ನಾಲೆಗೆ ಇಳಿದಿದ್ದಾರೆ.

ನಾಲೆಯಲ್ಲಿ ಭಾರೀ ಪ್ರಮಾಣದ ನೀರು ಹರಿಯುತ್ತಿದ್ದರಿಂದ ನೀರಿನಲ್ಲಿ ಮುಳುಗಿ ದಂಪತಿ ಸಾವನ್ನಪ್ಪಿದ್ದಾರೆ ದಂಪತಿ ಮನೆಗೆ ಬಾರದಿದ್ದರಿಂದ ಕುಟುಂಬಸ್ಥರು ಎಲ್ಲೆಡೆ ಹುಡುಕಾಟ ನಡೆಸಿದ್ದಾರೆ. ನಂತರ ನಾಲೆ ಬಳಿ ನೋಡಿದಾಗ ಬಟ್ಟೆಗಳು ದಡದಲ್ಲಿತ್ತು. ಈ ಹಿನ್ನೆಲೆ ಕುಟುಂಬಸ್ಥರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಇಂದು ಅಗ್ನಿಶಾಮಕದಳ ಸಿಬ್ಬಂದಿ ನಾಲೆಯಲ್ಲಿ ಶೋಧಕಾರ್ಯ ನಡೆಸಿದ ವೇಳೆ ಪತಿ ಗೋಪಾಲ್ ಮೃತದೇಹ ನಾಲೆಯಲ್ಲಿ ಪತ್ತೆಯಾಗಿದೆ. ಪತ್ನಿ ದೀಪು ಮೃತದೇಹಕ್ಕಾಗಿ ಶೋಧಕಾರ್ಯ ಮುಂದುವರಿದಿದೆ.

ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಚನ್ನರಾಯಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## 2 ಬಸ್ಸುಗಳು ಮುಖಾಮುಖಿ ಡಿಕ್ಕಿ; 6 ಸಾವು



**ಚೆನ್ನೈ:** ತಮಿಳುನಾಡಿನ ತೇಂಕಾಸಿ ಜಿಲ್ಲೆಯಲ್ಲಿ ಎರಡು ಖಾಸಗಿ ಬಸ್ಸುಗಳು ಮುಖಾಮುಖಿಯಾಗಿ ಢಿಕ್ಕಿಯಾಗಿ ಭಾರೀ ಸಾವು ನೋವು ಸಂಭವಿಸಿದೆ. ಈ ಭೀಕರ ಅಪಘಾತ ದುರಂತದಲ್ಲಿ ಆರು ಮಂದಿ ಸಾವನ್ನಪ್ಪಿದ್ದಾರೆ, 28 ಮಂದಿಗೆ ಗಾಯಗಳಾಗಿವೆ ಎಂದು ಪ್ರಾಥಮಿಕ ಮಾಹಿತಿ ತಿಳಿದುಬಂದಿದೆ.

ಪೊಲೀಸರು ನೀಡಿರುವ ಮಾಹಿತಿ ಪ್ರಕಾರ, ಮುಖಾಮುಖಿ ಡಿಕ್ಕಿ ಹೊಡೆದ ಎರಡು ಬಸ್ಸುಗಳಲ್ಲಿ ಒಂದು ಬಸ್ಸು ಮದುರೈನಿಂದ ಸೆಂಕೊಟ್ಟೈಗೆ ತೆರಳುತ್ತಿತ್ತು. ಮತ್ತೊಂದು ಬಸ್ಸು ತೇಂಕಾಸಿಯಿಂದ ಕೋವಿಲ್‌ಪಟ್ಟಿಗೆ ಹೋಗುತ್ತಿತ್ತು. ತೇಂಕಾಸಿ ಮದುರೈ ರಸ್ತೆಯಲ್ಲಿರುವ ಅಚ್ಚಂಪಟ್ಟಿ ಸಮೀಪದ ಇಡೈಯಕ್ಕಲ್‌ನ ದುರೈಸಾಮಿಪುರಂ ಎಂಬಲ್ಲಿ ಎರಡೂ ಬಸ್ಸುಗಳು ಮುಖಾಮುಖಿಯಾಗಿ ಡಿಕ್ಕಿ ಹೊಡೆದಿವೆ ಎರಡು ಬಸ್ಸುಗಳಲ್ಲಿ ಎಷ್ಟು ಪ್ರಯಾಣಿಕರು ಇದ್ದರು ಎನ್ನುವ ಮಾಹಿತಿ ತಿಳಿದುಬಂದಿಲ್ಲ.

ಆದರೆ, ಪ್ರಾಥಮಿಕ ಮಾಹಿತಿ ಪ್ರಕಾರ 6 ಮಂದಿ ಸಾವನ್ನಪ್ಪಿದ್ದಾರೆ. 28ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಅನೇಕ ಗಾಯಾಳುಗಳ ಸ್ಥಿತಿ ಗಂಭೀರ ವಾಗಿದೆ. ಗಾಯಾಳು ಗಳನ್ನು ತೇಂಕಾಸಿಯಲ್ಲಿರುವ ಸರ್ಕಾರಿ ಆಸ್ಪತ್ರೆಗೆ ಸಾಗಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಕಳೆದ ಮೂರ್ನಾಲ್ಕು ದಿನಗಳಿಂದ ತೇಂಕಾಸಿ ಮತ್ತು ತಿರುನೆಲ್ವೇಲಿ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುತ್ತಿದೆ. ಹಲವು ಪ್ರದೇಶಗಳು ಪ್ರವಾಹದಿಂದ ಭರ್ತಿಯಾಗಿವೆ. ಅನೇಕ ರಸ್ತೆಗಳು ಜಲಾವೃತಗೊಂಡಿವೆ. ಇದರಿಂದ ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸುವುದು ಕಷ್ಟವಾಯಿತು ಎಂದೆನ್ನಲಾಗಿದೆ.

ಅಪಘಾತ ನಡೆದ ಕೂಡಲೇ ಸ್ಥಳೀಯ ಗ್ರಾಮಸ್ಥರು ನೆರವಿಗೆ ಧಾವಿಸಿದ್ದಾರೆ. ಆಂಬುಲೆನ್ಸ್ ಗಳು ಕೂಡ ಸಮಯಕ್ಕೆ ಸರಿಯಾಗಿ ಬಂದು ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸಲು ನೆರವಾಗಿವೆ. ಅನೇಕ ಗಾಯಾಳುಗಳ ಪರಿಸ್ಥಿತಿ ಗಂಭೀರವಾಗಿ ರುವುದರಿಂದ ಸಾವಿನ ಸಂಖ್ಯೆ ಹೆಚ್ಚುವ ಸಾಧ್ಯತೆ ಇದೆ.

## ಚೆನ್ನೈ ಎಕ್ಸ್‌ಪ್ರೆಸ್‌ವೇನಲ್ಲಿ ಬ್ರಿಡ್ಜ್‌ನಿಂದ ಕೆಳಗುರುಳಿದ ಕಾರು ನಾಲ್ವರು ದುರ್ಮರಣ



**ಕೋಲಾರ:** ಬೆಂಗಳೂರು - ಚೆನ್ನೈ ಎಕ್ಸ್‌ಪ್ರೆಸ್ ಹೈವೇನಲ್ಲಿ ಕಾರು ಸೇತುವೆಯಿಂದ ಕೆಳಗೆ ಬಿದ್ದ ಪರಿಣಾಮ ನಾಲ್ವರು ಸಾವನ್ನಪ್ಪಿದ ಘಟನೆ ಕೋಲಾರದ ಮಾಲೂರು ತಾಲೂಕಿನ ಅಬ್ಬೇನಹಳ್ಳಿ ಬಳಿ ನಡೆದಿದೆ. ಬೆಂಗಳೂರು - ಚೆನ್ನೈ ಎಕ್ಸ್ ಪ್ರೆಸ್ ಹೈವೇ ಯಲ್ಲಿ ಚಾಲಕನ ನಿಯಂತ್ರಣ ತಪ್ಪಿ ಡಿವೈಡ ರ್‌ಗೆ ಡಿಕ್ಕಿಯಾಗಿದೆ. ಬಳಿಕ ಬ್ರಿಡ್ಜ್ ನಿಂದ ಕೆಳಗೆ ಬಿದ್ದಿದೆ.

ಈ ದುರ್ಘಟನೆಯಲ್ಲಿಗೋಪಿ (38), ಗೌತಮ್ ರಮೇಶ್ (28), ಹರಿಹರನ್ (27), ಜಯಂಕರ್ (30) ಮೃತಟ್ಟಿದ್ದು, ಇವರೆಲ್ಲರೂ ಚೆನ್ನೈ ಮೂಲದವರು ಎಂದು ತಿಳಿದುಬಂದಿದೆ.

ಕಾರು ಬ್ರಿಡ್ಜ್ ಮೇಲಿಂದ ಕೆಳಗೆ ಬಿದ್ದಿದ್ದರಿಂದ ತೀವ್ರವಾಗಿ ಗಾಯಗೊಂಡಿದ್ದ ಯುವಕರನ್ನು ಕೋಲಾರದ ಆರ್ ಎಲ್ ಜಾಲಪ್ಪ ಆಸ್ಪತ್ರೆಗೆ ಚಿಕಿತ್ಸೆಗೆ ಸಾಗಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೇ ಯುವಕರು ಸಾವನ್ನಪ್ಪಿದ್ದಾರೆ.

ಈ ಬಗ್ಗೆ ಮಾಲೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬ್ರಿಡ್ಜ್ ಮೇಲಿಂದ ನಾಲ್ಕು ಗಾಲಿಗಳು ಮೇಲೆ ಮಾಡಿ ಕಾರು ಬಿದ್ದಿದೆ. ಇನ್ನು ಡಿವೈಡರ್‌ಗೆ ಡಿಕ್ಕಿ ಹೊಡೆದು ಬಳಿಕ ಬ್ರಿಡ್ಜ್ ಮೇಲಿಂದ ಕೆಳಗುರುಳಿದ ರಭಸಕ್ಕೆ ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ.

## ಹೆಚ್‌ಡಿಕೆ ಅಪ್ಪಟ ಅಭಿಮಾನಿ ಆತ್ಮಹತ್ಯೆ ನಿಖಿಲ್ ಕುಮಾರಸ್ವಾಮಿ ಭೇಟಿ



**ಮಂಡ್ಯ:** ಕೌಟುಂಬಿಕ ವಿಚಾರವಾಗಿ ಖಿನ್ನತೆಗೆ ಒಳಗಾಗಿ ಮಾಜಿ ಸಿಎಂ ಹೆಚ್ ಡಿ ಕುಮಾರಸ್ವಾಮಿ ಅಭಿಮಾನಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮಂಡ್ಯ ಜಿಲ್ಲೆ ಮದ್ದೂರು ತಾಲೂಕಿನ ದೇವೇಗೌಡನದೊಡ್ಡಿಯಲ್ಲಿ ನಡೆದಿದೆ.

ದೇವೇಗೌಡನದೊಡ್ಡಿ ಗ್ರಾಮದ ಮಹದೇವು (31) ಆತ್ಮಹತ್ಯೆಗೆ ಶರಣಾದ ವ್ಯಕ್ತಿ. ಮೂರು ದಿನಗಳ ಹಿಂದೆ ಮರವೊಂದಕ್ಕೆ ನೇಣುಬಿಗಿದುಕೊಂಡು ಮಹದೇವು ಆತ್ಮಹತ್ಯೆ ಮಾಡಿಕೊಂಡಿದ್ದರು. ಭಾನುವಾರ ಮಹದೇವು ಕುಟುಂಬಸ್ಥರು ಅಂತ್ಯಕ್ರಿಯೆ ನೆರವೇರಿಸಿದ್ದಾರೆ. ಮಹದೇವು ಕುಮಾರಸ್ವಾಮಿ ಮತ್ತೆ ಸಿಎಂ ಆಗುವವರೆಗೂ ಚಪ್ಪಲಿ ತೊಡುವುದಿಲ್ಲ ಎಂದು ಪ್ರತಿಜ್ಞೆ ಮಾಡಿದ್ದರು. ಜೆಡಿಎಸ್ ಪಕ್ಷದ ಕಾರ್ಯಕರ್ತನಾಗಿ, ಹೆಚ್.ಡಿ. ಕುಮಾರಸ್ವಾಮಿ ಅಪ್ಪಟ ಅಭಿಮಾನಿಯಾಗಿದ್ದ ಮಹದೇವು ಕುಮಾರಸ್ವಾಮಿ ಸಿಎಂ ಅಧಿಕಾರ ಕಳೆದುಕೊಂಡಾಗ ಅವ್ರು ಮತ್ತೆ ಸಿಎಂ ಆಗಬೇಕು, ಮತ್ತೆ ಸಿಎಂ ಆಗುವವರೆಗೂ ಚಪ್ಪಲಿ ತೊಡುವುದಿಲ್ಲ ಎಂದು ಪ್ರತಿಜ್ಞೆ ಮಾಡಿದ್ದರು. ಅದರಂತೆ ಚಪ್ಪಲಿ ತೊಡದೆ ಓಡಾಡುತ್ತಿದ್ದರು.

ಅಪ್ಪಟ ಅಭಿಮಾನಿಯ ನಿಧನಕ್ಕೆ ಹೆಚ್‌ಡಿಕೆ ಸೇರಿದಂತೆ ಪಕ್ಷದ ನಾಯಕರು ಸಂತಾಪ ಸೂಚಿಸಿದ್ದಾರೆ. ಇನ್ನು ಹೆಚ್‌ಡಿಕೆ ಅಭಿಮಾನಿ ಮಹದೇವು ಆತ್ಮಹತ್ಯೆ ಹಿನ್ನೆಲೆ ಮೃತರ ಮನೆಗೆ ನಿಖಿಲ್ ಕುಮಾರಸ್ವಾಮಿ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ್ದಾರೆ. ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕುಮಾರಸ್ವಾಮಿಯವರ ಅಪ್ಪಟ ಅಭಿಮಾನಿ ಮಹದೇವು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಯಾವ ಕಾರಣಕ್ಕೆ ಎಂದು ನಮಗೆ ಅರ್ಥವಾಗುತ್ತಿಲ್ಲ. ಹೋದ ಜೀವ ವಾಪಸ್ ತರಲು ಸಾಧ್ಯವಿಲ್ಲ. ನನಗೆ, ಕುಮಾರಣ್ಣಗೆ ಈ ಘಟನೆಯಿಂದ ಮನಸ್ಸಿಗೆ ನೋವಾಗಿದೆ.

ಕುಮಾರಣ್ಣ ಸಿಎಂ ಆಗುವವರೆಗೂ ಚಪ್ಪಲಿ ಧರಿಸಲ್ಲ ಎಂದಿದ್ದರು. ಅವರ ಕುಟುಂಬಕ್ಕೆ ನೋವನ್ನ ಭರಿಸುವ ಶಕ್ತಿಯನ್ನ ನೀಡಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ. ಅವರ ಕುಟುಂಬದ ಜೀವನೋಪಾಯಕ್ಕೆ ನೆರವು ನೀಡುತ್ತೇವೆ ಎಂದು ಭರವಸೆ ನೀಡಿದರು.

## ಅಮೆರಿಕ ವಿಸಾ ನಿರಾಕರಿಸಿದಕ್ಕೆ ವೈದ್ಯೆ ಆತ್ಮ ಹತ್ಯೆ

**ಹೈದರಾಬಾದ್:** ಅಮೆರಿಕದ ವೀಸಾ ತಿರಸ್ಕರಿಸಲ್ಪಟ್ಟಿದ್ದಕ್ಕೆ ಖಿನ್ನತೆಗೆ ಒಳಗಾಗಿ ಆಂಧ್ರಪ್ರದೇಶದ ಗುಂಟೂರು ಜಿಲ್ಲೆಯ ಮಹಿಳಾ ವೈದ್ಯೆ ಡಾ. ರೋಹಿಣಿ (38) ಹೈದರಾಬಾದ್‌ನಲ್ಲಿರುವ ತಮ್ಮ ಫ್ಲಾಟ್‌ನಲ್ಲಿ ಆತ್ಮಹತ್ಯೆ ಮಾಡಿಕೊಂಡಿದರುವ ಘಟನೆ ಭಾನುವಾರ ನಡೆದಿದೆ.

ವೈದ್ಯೆ ರೋಹಿಣಿ ಹೈದರಾಬಾದ್‌ನ ತಮ್ಮ ಫ್ಲಾಟ್‌ನಲ್ಲಿ ಏಕಾಂಗಿಯಾಗಿದ್ದರು. ಭಾನುವಾರ ಬೆಳಗ್ಗೆ ಎಷ್ಟೇ ಬಾರಿ ಬಾಗಿಲು ಬಡಿದರೂ ಒಳಗಿಂದ ಯಾವುದೇ ಪ್ರತಿಕ್ರಿಯೆ ಇಲ್ಲದಿದ್ದರಿಂದ, ಮನೆಕೆಲಸದಾಕೆಗೆ ಅನುಮಾನ ಬಂದಿತು. ಈ ಬಗ್ಗೆ ಅವರು ಹೈದರಾಬಾದ್‌ನಲ್ಲೇ ವಾಸಿಸುತ್ತಿದ್ದ ರೋಹಿಣಿಯ ಕುಟುಂಬದವರಿಗೆ ತಿಳಿಸಿದರು. ಮನೆಯವರು ತ್ವರಿತವಾಗಿ ಸ್ಥಳಕ್ಕೆ ಬಂದು ಬಾಗಿಲು ಒಡೆದು ನೋಡಿದಾಗ, ರೋಹಿಣಿ ಗಂಭೀರವಾಗಿ ಅಸುನೀಗಿದ್ದರು. ಘಟನೆಯನ್ನು ತಿಳಿದ ಪೊಲೀಸರು ಸ್ಥಳಕ್ಕೆ ಭೇಟಿ ಈಡಿ ಪರಿಶೀಲನೆ ನಡೆಸಿದ್ದಾರೆ. ಸ್ಥಳೀಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದಂತೆ, ಮನೆಯವರು ಬಾಗಿಲು ಒಡೆದು ನೋಡಿದಾಗ ಆಕೆ ಆತ್ಮಹತ್ಯೆ ಮಾಡಿಕೊಂಡಿರುವುದು ಬೆಳಕಿಗೆ ಬಂದಿದೆ ಎಂದು ದೃಢಪಡಿಸಿದರು.

ಪೊಲೀಸರು ನಡೆಸಿದತನಿಖೆಯಲ್ಲಿ ಒಂದು ಡೆತ್ ನೋಟ್ (ಸುಸೈಡ್ ನೋಟ್) ಪತ್ತೆಯಾಗಿದೆ. ಈ ನೋಟ್‌ನಲ್ಲಿ ಡಾ. ರೋಹಿಣಿ ತಮ್ಮ ಅಮೆರಿಕದ ವೀಸಾ ಅರ್ಜಿ ತಿರಸ್ಕರಿಸಲ್ಪಟ್ಟಿದ್ದಕ್ಕೆ ಗಾಢ ನಿರಾಶೆ ಮತ್ತು ಖಿನ್ನತೆಗೆ ಒಳಗಾಗಿದ್ದುದನ್ನು ಸ್ಪಷ್ಟಪಡಿಸಿದ್ದಾರೆ. ಕೆಲಸದ ಸಲುವಾಗಿ ಅಮೆರಿಕಾ ಪ್ರವಾಸಕ್ಕೆ ಹೋಗುವುದು ಅವರ ಕನಸಾಗಿತ್ತು ಮತ್ತು ವೀಸಾ ನಿರಾಕರಣೆಯು ಅವರಿಗೆ ಬಹಳ ಆಘಾತ ತಂದಿತ್ತು ಎಂದು ತನಿಖೆಯಿಂದ ತಿಳಿದುಬಂದಿದೆ.

ಮೃತ ವೈದ್ಯೆಯ ತಾಯಿ ಲಕ್ಷ್ಮಿ ಈ ಬಗ್ಗೆ ಮಾತನಾಡಿ, ನನ್ನ ಮಗಳು ತನ್ನ ವೃತ್ತಿಜೀವನದಲ್ಲಿ ಮುನ್ನಡೆಯಲು ಅಮೆರಿಕಕ್ಕೆ ಹೋಗಲು ಬಹಳ ಆಸಕ್ತಿಯಿಂದ ಕಾಯುತ್ತಿದ್ದಳು. ಆದರೆ ವೀಸಾ ನಿರಾಕರಣೆಯ ನಂತರ ಅವಳು ಬಹಳ ನಿರಾಶೆ ಮತ್ತು ಖಿನ್ನತೆಗೆ ಒಳಗಾಗಿದ್ದಳು. ನಾವು ಅವಳನ್ನು ಧೈರ್ಯಗೊಳಿಸಲು ಪ್ರಯತ್ನಿಸಿದೆವು, ಆದರೆ ಸಾಧ್ಯವಾಗಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಪೊಲೀಸರು ಈ ಘಟನೆಗೆ ಸಂಬಂಧಿಸಿದಂತೆ ಪ್ರಕರಣ ದಾಖಲಿಸಿದ್ದಾರೆ. ಮರಣೋತ್ತರ ಪರೀಕ್ಷೆಯ ನಂತರ ಮೃತದೇಹವನ್ನು ಕುಟುಂಬ ದವರಿಗೆ ಹಸ್ತಾಂತರಿಸಲಾಗಿದೆ. ಅತಿಯಾದ ನಿದ್ರೆ ಮಾತ್ರೆ ಸೇವಿಸಿ ಅಥವಾ ಇಂಜೆಕ್ಷನ್ ತೆಗೆದುಕೊಂಡು ಆತ್ಮಹತ್ಯೆ ಮಾಡಿಕೊಂಡಿರ ಬಹುದೆಂದು ಪೊಲೀಸರು ಶಂಕಿಸುತ್ತಿದ್ದಾರೆ.

ವರದಿ ಬಂದ ಬಳಿಕ ನಿಖರವಾದ ಮರಣ ಕಾರಣವನ್ನು ಅಧಿಕೃತವಾಗಿ ಘೋಷಿಸಲಾಗುವುದು. ಈ ಘಟನೆಯು ವೃತ್ತಿಪರ ಯುವಕರು ಮತ್ತು ವೈದ್ಯರು ಎದುರಿಸುತ್ತಿರುವ ಮಾನಸಿಕ ಒತ್ತಡ ಮತ್ತು ಖಿನ್ನತೆಯ ಗಂಭೀರ ಸಮಸ್ಯೆಯ ಕಡೆಗೆ ದೃಷ್ಟಿ ಸೆಳೆಯುತ್ತದೆ.

## ಪಕ್ಷದ ಗೆಲುವಿಗೆ ಶ್ರಮಿಸಿದ ಮುಖಂಡರನ್ನು ಅಭಿನಂದಿ ಸುವ ಏಕೈಕ ಆಡಳಿತವೇ ಕಾಂಗ್ರೆಸ್ ಸರ್ಕಾರ



**ದೇವನಹಳ್ಳಿ** :- ರೈತರ ಸರ್ವತೋಮುಖ ಅಭಿವೃದ್ಧಿ ಶ್ರಮಿಸುತ್ತಿರುವ ಸರ್ಕಾರ ಕಾಂಗ್ರೆಸ್ ಸರ್ಕಾರವಾಗಿದೆ ನಮ್ಮಲ್ಲಿ ಪಕ್ಷದ ಜೊತೆಗೆ ಜನಸಾಮಾನ್ಯರ ಅಗತ್ಯತೆ ಗಳನ್ನು ಪೂರೈಸುವ ಸೇವಾ ಮನೋಭಾವ ಸ್ಥಳೀಯ ಮುಖಂಡರಲ್ಲಿ ಹೆಚ್ಚಿಗೆ ಕಂಡು ಬರುವ ವ್ಯಕ್ತಿಗಳನ್ನು ಸರ್ಕಾರವೇ ಗುರುತಿಸಿ ಸ್ಥಾನಮಾನಗಳನ್ನು ನೀಡಲಿದೆ ಎಂದು ಖಾದಿಬೋರ್ಡ್ ಮಾಜಿ ಅಧ್ಯಕ್ಷ ಶ್ರೀನಿವಾಸ್ ತಿಳಿಸಿರುತ್ತಾರೆ. ದೇವನಹಳ್ಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬೆಂಗಳೂರು ಗ್ರಾಮಾಂತರ ಸಹಕಾರ ಯೂನಿಯರ್ ಬ್ಯಾಂಕ್ ನೂತನ ಉಪಾಧ್ಯಕ್ಷ ಕಾರಹಳ್ಳಿ ಜಯರಾಮ್, ನಿರ್ದೇಶಕ ಸಂಪಂಗಿ, ಕರ್ನಾಟಕ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ಪ್ರಸನ್ನ ಕುಮಾರ್, ಅವರುಗಳಿಗೆ ಆಲೂರು ದುದ್ದನಹಳ್ಳಿ ಗ್ರಾಮ ಪಂಚಾಯಿತಿಯ ಕಾಂಗ್ರೆಸ್ ಪಕ್ಷದ ಮುಖಂ ಡರು ಏರ್ಪಡಿಸಿದ್ದ ಅಭಿನಂ ದನೆ ಸಲ್ಲಿಸುವ ವೇಳೆ ಮಾತ ನಾಡಿದರು.

ದುದ್ದನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಮಾಜಿ ಅಧ್ಯಕ್ಷ ಡಿಆರ್ ಮುನೇಗೌಡ (ಜಾಲಪ್ಪ) ಮಾತನಾಡಿ, ಸಹಕಾರ ಕ್ಷೇತ್ರದಲ್ಲಿಗಣನೀಯವಾಗಿ ಸೇವೆ ಸಲ್ಲಿಸಿರುವ ಅರ್ಹ ಸಹಕಾರಿಗಳನ್ನು ಗುರುತಿಸಿ ಸಹಕಾರ ರತ್ನ ಪ್ರಶಸ್ತಿ ನೀಡಲಾಗು ತ್ತಿದ್ದು, ಕಾಂಗ್ರೆಸ್ ಪಕ್ಷದಲ್ಲಿ ನಿಷ್ಠೇ ಪ್ರಾಮಾಣಿಕ ವ್ಯಕ್ತಿಗಳಿಗೆ ಮಾತ್ರ ಸ್ಥಾನಮಾನ ಗಳನ್ನು ನೀಡು ತ್ತಿದೆ. ಕ್ಷೇತ್ರದ ಶಾಸಕರು ಕರ್ನಾಟಕ ಸರ್ಕಾರದ ಜನಪ್ರಿಯ ಮಂತ್ರಿಗಳಾದಂತ ಕೆಎಚ್. ಮುನಿಯಪ್ಪನವರು ಆಡಳಿತ ವ್ಯಕರಿ ಉತ್ತಮವಾ ಗಿದೆ.

ತಾಲೂಕಿನಲ್ಲಿ ಪಕ್ಷ ಬಲವರ್ದನೆಗೆ ಶ್ರಮಿಸಿದ್ದಾ ರೆಂದರು.

## ಗಂಡ-ಅತ್ತೆ-ಮಾವ-ಮೈದುನ ಕಿರುಕುಳ: ವಿಶ್ವೇಶ್ವರಯ್ಯ ಪಿಕ್ ಅಪ್ ಡ್ಯಾಂ ಆತ್ಮಹತ್ಯೆ ಪ್ರಕರಣದಲ್ಲಿ 3 ಆರೋಪಿಗಳು ಬಂಧನ





ಗಂಡ, ಅತ್ತೆ, ಮಾವ, ಮೈದುನ ಹಾಗೂ ಸಂಬಂಧಿಕರ ಕಿರುಕುಳಕ್ಕೆ ಬೇಸತ್ತು ವಿಡಿಯೋ ರೆಕಾರ್ಡ್ ಮಾಡಿ ಸಂಬಂಧಿಕರಿಗೆ ಶೇರ್ ಮಾಡಿ ದೊಡ್ಡಬಳ್ಳಾಪುರ ತಾಲೂಕಿನ ಎಸ್ ಎಸ್ ಘಾಟಿ ಸುಬ್ರಹ್ಮಣ್ಯ ದೇವಾಲಯ ಸಮೀಪವಿರುವ ಸರ್. ಎಂ ವಿಶ್ವೇಶ್ವರಯ್ಯ ಪಿಕ್ ಅಪ್ ಡ್ಯಾಂಗೆ ಹಾರಿ ಗೃಹಿಣಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಅ.20ರಂದು ಬೆಳಕಿಗೆ ಬಂದಿತ್ತು.

ಈ ಪ್ರಕರಣಕ್ಕೆ ಸಂಬಂಧಿಸಿದ ಪ್ರಮುಖ ಐವರು ಆರೋಪಿಗಳನ್ನು ಬಂಧನ ಮಾಡಲಾಗಿದೆ. ಓರ್ವ ಆರೋಪಿ ತಲೆಮರೆಸಿಕೊಂಡಿದ್ದು, ಆತನನ್ನು ಬಂಧಿಸಲು ಪೊಲೀಸರು ಹುಡುಕಾಟ ನಡೆಸುತ್ತಿದ್ದಾರೆ.

ಅ.20ರಂದು ಮೃತಳ ಗಂಡ ಎ1 ವೇಣು(30), ಮಾವ ಎ2 ಗೋವಿಂದಪ್ಪ(55)ನನ್ನು ಬಂಧನ ಮಾಡಲಾಗಿತ್ತು. ಘಟನೆ ನಡೆದ ದಿನದಿಂದ ಎ3 ನಾರಾಯಣಸ್ವಾಮಿ, ಎ4 ಮುತ್ತೇಗೌಡ(49), ಎ5 ಭಾರತಮ್ಮ(50), ಎ6 ಪಲ್ಲವಿ ತಲೆ ಮರೆಸಿಕೊಂಡಿದ್ದರು.

ಇದೀಗ ಇಂದು (ನ.22) ಮೃತಳ ಗಂಡನಾದ ಎ1 ಆರೋಪಿ ವೇಣುವಿನ ಚಿಕ್ಕಪ್ಪ ಹಾಗೂ ಸರ್ಕಾರಿ ಶಾಲಾ ಶಿಕ್ಷಕ ಎ4 ಮುತ್ತೇಗೌಡ(49), ಮೃತಳ ಅತ್ತೆ ಎ5 ಭಾರತಮ್ಮ(50), ಮುತ್ತೇಗೌಡನ ಹೆಂಡತಿ ಹಾಗೂ ಸರ್ಕಾರಿ ಶಾಲಾ ಶಿಕ್ಷಕಿ ಎ6 ಪಲ್ಲವಿಯನ್ನು ಸರ್ಜಾಪುರದಲ್ಲಿ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಆದರೆ, ಮೃತಳ ಮೈದುನ ಎ3 ನಾರಾಯಣಸ್ವಾಮಿ ತಲೆಮರೆಸಿಕೊಂಡಿದ್ದು, ಈತನ ಜಾಡು ಇನ್ನೂ ಪತ್ತೆಯಾಗಿಲ್ಲ. ಈತನ ಬಂಧನಕ್ಕೂ ಪೊಲೀಸರು ಬಲೆ ಬೀಸಿದ್ದಾರೆ.

ಗಂಡ ಹಾಗೂ ಗಂಡನ ಸಂಬಂಧಿಕರ ಕಿರುಕುಳಕ್ಕೆ ಮನನೊಂದ ದೊಡ್ಡಬಳ್ಳಾಪುರ ತಾಲೂಕಿನ ಸೋತೆನಹಳ್ಳಿ ಗ್ರಾಮದ ಪುಷ್ಪಾ(28) ಆತ್ಮಹತ್ಯೆ ಮಾಡಿಕೊಂಡಿರುವ ಗೃಹಿಣಿ. ತಪಸೀಹಳ್ಳಿ ಗ್ರಾಮದ ವೇಣು ಜೊತೆ ಗುರು ಹಿರಿಯರ ನಿಶ್ಚಯದಂತೆ ಕಳೆದ ಒಂದು ವರ್ಷದ ಹಿಂದೆ ವಿವಾಹವಾಗಿತ್ತು. ವಿವಾಹವಾದಗಿನಿಂದಲೂ ಗಂಡ, ಅತ್ತೆ, ಮಾವ, ಮೈದುನ ಹಾಗೂ ಸಂಬಂಧಿಕರಿಂದ ವರದಕ್ಷಿಣೆ, ನಿವೇಶನಕ್ಕಾಗಿ ಕಿರುಕುಳ ನೀಡುತ್ತಿದ್ದರು ಎಂದು ಮೃತಳ ಸಂಬಂಧಿಕರು ಆರೋಪಿ ಸಿದ್ದಾರೆ. ಮದುವೆ ಆಗಿದ್ದಾಗಿನಿಂದಲೂ ಹೆಂಡತಿ ಜೊತೆ ಸಂಸಾರ ಮಾಡದ ಗಂಡ, ಮಗು ಬೇಕು ಎಂದರೆ ಮೈದುನನ ಜೊತೆ ಮಲಗು ಎನ್ನುತ್ತಿದ್ದ ಅತ್ತೆ ಮಾವ. ಕಿರುಕುಳ ತಾಳಲಾರದೆ ಗೃಹಿಣಿ ಸಾವನ್ನಪ್ಪಿರಬಹುದು ಎಂದು ಶಂಕಿಸಲಾಗಿತ್ತು...

ಕಳೆದ ವರ್ಷವಷ್ಟೆ ಮಗಳ ಜೀವನ ಚೆನ್ನಾಗಿರಲಿ ಅಂತ ಪುಷ್ಪಾ ತಂದೆ ನಾರಾಯಣಪ್ಪ 5 ಲಕ್ಷ ಹಣ ವರದಕ್ಷಿಣೆ, ಚಿನ್ನಾಭರಣವನ್ನೆಲ್ಲ ಕೊಟ್ಟು ಅದ್ದೂರಿಯಾಗಿ ಮದುವೆ ಮಾಡಿಕೊಟ್ಟಿದ್ರಂತೆ. ಆದ್ರೆ ಅಷ್ಟೆಲ್ಲ ಮಾಡಿದ್ರು ಗಂಡ ವೇಣು, ಅತ್ತೆ ಭಾರತಿ, ಮಾವ ಗೋವಿಂದಪ್ಪ, ಮತ್ತು ಮೈದುನ ನಾರಾಯಣಸ್ವಾಮಿ ಸೇರಿಕೊಂಡು ಮಗಳಿಗೆ ಕಿರುಕುಳ ನೀಡಿ ಸಾಯುವಂತೆ ಮಾಡಿದ್ದು, ಮಗಳ ಸಾವಿಗೆ ಗಂಡನ ಮನೆಯವರೆ ಕಾರಣ ಅಂತ ಮೃತಳ ತಂದೆ ಮಹಿಳಾ ಪೊಲೀಸ್ ಠಾಣೆಯಲ್ಲಿ ವರದಕ್ಷಿಣೆ ಕಿರುಕುಳದ ದೂರು ..

ಮದುವೆಯ ದಿನದಿಂದಲೂ ವೇಣು ತನ್ನ ಪತ್ನಿಯೊಂದಿಗೆ ಸಹಜ ದಾಂಪತ್ಯ ಜೀವನ ನಡೆಸಿರಲಿಲ್ಲ. ಮಗು ಬೇಕು ಎಂದರೆ ಮೈದುನನ ಜೊತೆ ಮಲಗು ಎಂದು ಹೇಳಿದ್ದು, ಅತ್ತೆ ಮತ್ತು ಇತರ ಮನೆಯವರು ಪುಷ್ಪಾಳಿಗೆ ಮಾನಹಾನಿ ಉಂಟು ಮಾಡುವ ರೀತಿಯಲ್ಲಿ ವರ್ತಿಸುತ್ತಿದ್ದರು ಎಂಬ ಆರೋಪ ಕೇಳಿಬಂದಿದೆ. ಈ ರೀತಿಯ ಮಾನಸಿಕ ಹಿಂಸೆ ಮತ್ತು ನಿರಂತರ ಕಿರುಕುಳದಿಂದ ಬೇಸತ್ತ ಪುಷ್ಪಾ, ಕೊನೆಗೆ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ಮೃತಳ ಸಂಬಂಧಿಕರು ಆರೋಪಿಸಿದ್ದಾರೆ. ಆತ್ಮಹತ್ಯೆಗೆ ಮುನ್ನ ಚಿತ್ರೀಕರಿಸಿದ ವಿಡಿಯೋದಲ್ಲಿ ಪುಷ್ಪಾ ತಾನು ಎದುರಿಸುತ್ತಿದ್ದ ಕಿರುಕುಳ ಮತ್ತು ಕುಟುಂಬದವರ ಅಸಹನೀಯ ವರ್ತನೆ ಕುರಿತು ಸ್ಪಷ್ಟವಾಗಿ ಬಿಚ್ಚಿಟ್ಟಿದ್ದಾರೆ.

ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು. ಇದು ಪ್ರಕರಣಕ್ಕೆ ಮತ್ತಷ್ಟು ಗಂಭೀರ ಪಡೆದುಕೊಂಡಿತ್ತು. ಈ ಘಟನೆಯ ಬಗ್ಗೆ ದೊಡ್ಡಬಳ್ಳಾಪುರ ಠಾಣಾ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಗಂಡ ವೇಣು, ಅತ್ತೆ ಮತ್ತು ಇತರ ಮನೆಯವರ ವಿರುದ್ಧ ಹಿಂಸೆ ಮತ್ತು ಆತ್ಮಹತ್ಯೆಗೆ ಪ್ರಚೋದನೆ ಆರೋಪಗಳಡಿ ತನಿಖೆ ಮಾಡುತ್ತಿದ್ದಾರೆ.ನಾನು ಮದುವೆಯಾಗಿ ಗಂಡನ ಮನೆಗೆ ಹೋದ ದಿನದಿಂದ ನನ್ನ ಗಂಡ ನನ್ನ ಜೊತೆ ಸರಿಯಾಗಿ ಸಂಸಾರ ಮಾಡದೆ, ನನ್ನಿಂದ ದೂರ ಉಳಿಯುತ್ತಿದ್ದರು. ಸಂಸಾರ ಮಾಡಬೇಕೆಂದು ಎಷ್ಟು ಪ್ರಯತ್ನ ಪಟ್ಟರು ಗಂಡ ನನ್ನ ಜೊತೆ ಸರಿಯಾಗಿ ಮಾತನಾಡುತ್ತಿರಲಿಲ್ಲ. ಈ ವಿಚಾರವನ್ನು ನಮ್ಮ ಅತ್ತೆ ಮಾವನಿಗೆ ತಿಳಿಸಿದರೆ ಎಲ್ಲಾ ಸರಿ ಹೋಗುತ್ತೆ ಸುಮ್ಮನಿರು ಎಂದು ಆರಂಭದಲ್ಲಿ ಹೇಳುತ್ತಿದ್ದರು. ಗಂಡನಿಗೆ ನಾವು ಮಗು ಮಾಡಿಕೊಳ್ಳೋಣ ಎಂದು ಕೇಳಿದರೆ, ಈಗ ಮಗು ಬೇಡ 1-2 ವರ್ಷ ಹೋಗಲಿ ನಂತರ ಮಗು ಮಾಡಿಕೊಳ್ಳೋಣ. ಈಗ ಯಾಕೆ ಅರ್ಜೆಂಟ್ ಎಂದು ನನಗೆ ಬೈಯುತ್ತಿದ್ದರು ಪುಷ್ಪಾವತಿ ಹೇಳಿಕೊಂಡಿದ್ದಾರೆ.

ನನಗೆ ಅನುಮಾನ ಬಂದು, ನಿನಗೇನಾದರೂ ತೊಂದರೆ ಇದ್ದರೆ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದುಕೊಳ್ಳೋಣ ಎಂದು ಗಂಡನಿಗೆ ತಿಳಿಸಿದ್ದೆ. ಆಗ ನನಗೆ ಅವಾಚ್ಯ ಶಬ್ದಗಳಿಂದ ಬೈದಿದ್ದರು. ಅವರನ್ನು ಮುಟ್ಟಿದರೆ ಕಾಲಿನಿಂದ ನನ್ನ ಎದೆಗೆಲ್ಲ ಒದೆಯುತ್ತಿದ್ದರು. ಮಗು ಬೇಕು ಎಂದರೆ ನನ್ನ ಚಿಕ್ಕ ಮಗನ ಬಳಿ ಹೋಗು ಎಂದು ಅತ್ತೆ-ಮಾವ ಹೇಳುತ್ತಿದ್ದರು. ಮೈದುನನೂ ಅದೇ ರೀತಿ ಮಾತಾಡಿ ಮಾನಸಿಕ ಹಿಂಸೆ ನೀಡುತ್ತಿದ್ದ. ಈ ಬಗ್ಗೆ ನನ್ನ ಹೆತ್ತವರಿಗೆ ತಿಳಿಸಿದ್ದು, ಅವರು ಬಂದು ಹೇಳಿದರೂ ಏನೂ ಪ್ರಯೋಜನವಾಗಿಲ್ಲ ಎಂದು ಪುಷ್ಪಾವತಿ ವಿಡಿಯೋದಲ್ಲಿ ಆರೋಪಿಸಿದ್ದರು.

ಈ ಕುರಿತು ಮೃತಳ ಸಂಬಂಧಿ ಧನಂಜಯ್ ಮಾತನಾಡಿ, ಐವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಓರ್ವ ಆರೋಪಿ ತಲೆಮರೆಸಿಕೊಂಡಿದ್ದಾನೆ. ಆತನನ್ನು ಪೊಲೀಸರು ಬಂಧಿಸುತ್ತಾರೆ ಎಂಬ ಭರವಸೆ ಇದೆ. ಪೊಲೀಸರ ಕಾರ್ಯವೈಖರಿಗೆ ಮೆಚ್ಚುಗೆ ಇದೆ. ಆರು ಜನ ಆರೋಪಿಗಳಿಗೆ ತಕ್ಕ ಶಿಕ್ಷೆಯಾಗಬೇಕು. ಆಗ ನಮ್ಮ ಮಗುವಿನ ಆತ್ಮಕ್ಕೆ ಶಾಂತಿ ಸಿಗುತ್ತದೆ. ನಮ್ಮ ಹೆಣ್ಣುಮಗುವನ್ನು ಕಳೆದುಕೊಂಡು ಅನಾಥರಾಗಿದ್ದೇವೆ. ನಮ್ಮ ಮಗುವಿಗೆ ಆದ ಅನ್ಯಾಯ ಯಾವ ಹೆಣ್ಣುಮಗುವಿಗೂ ಆಗಬಾರದು. ಆದ್ದರಿಂದ ಆರೋಪಿಗಳಿಗೆ ಶಿಕ್ಷೆಯಾಗಲೇಬೇಕು ಎಂದು ಹೇಳಿದರು...

**ನವೆಂಬರ್ 27 ರಂದು ನಿಮ್ಮ ಡಿಜಿಟಲ್ ವಾರ್ತೆ ದಿನಪತ್ರಿಕೆ ಹಾಗೂ ಡಿಜಿಟಲ್ ವಾಹಿನಿ ನೂತನ ಕಚೇರಿ ಉದ್ಘಾಟನೆಗೊಳ್ಳಲಿದ್ದು , ಸರ್ವರಿಗೂ ಆತ್ಮೀಯ ಆಮಂತ್ರಣ**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಹಿಂಸಾ ರೂಪಕ್ಕೆ ತಿರುಗಿದ ದೆಹಲಿ ಪ್ರತಿಭಟನೆ – 15ಕ್ಕೂ ಹೆಚ್ಚು ಮಂದಿ ಬಂಧನ




**ನವದೆಹಲಿ:** ಮಿತಿಮೀರಿದ ವಾಯು ಮಾಲಿನ್ಯದಿಂದ ತೀವ್ರ ಅಸಮಾಧಾನಗೊಂಡು ದೆಹಲಿಯ ಇಂಡಿಯಾ ಗೇಟ್ ಬಳಿ ನಡೆಸುತ್ತಿದ್ದ ಪ್ರತಿಭಟನೆ ಸೋಮವಾರ (ಇಂದು) ಹಿಂಸಾತ್ಮಕ ರೂಪಕ್ಕೆ ತಿರುಗಿದೆ. ಪ್ರತಿಭಟನೆ ವೇಳೆ ಕೆಲವರು ಚಿಲ್ಲಿ, ಪೆಪ್ಪರ್ ಸ್ಪ್ರೆ ಬಳಸಿ ಪೊಲೀಸರ ಮೇಲೆ ಹಲ್ಲೆ ನಡೆಸಿದ ಆರೋಪದ ಮೇಲೆ 15ಕ್ಕೂ ಹೆಚ್ಚು ಪ್ರತಿಭಟನಾಕಾರರನ್ನ ಬಂಧಿಸಿದ್ದಾರೆ. ಅಲ್ಲದೇ ಪ್ರತಿಭಟನೆ ವೇಳೆ ಇತ್ತೀಚೆಗೆ ಎನ್‌ಕೌಂಟರ್‌ಗೆ ಬಲಿಯಾದ ನಕ್ಸಲ್ ಮುಖಂಡ ಮಾದ್ವಿ ಹಿಡ್ಮಾನ ಪೋಸ್ಟರ್‌ಗಳು ಕಂಡುಬಂದಿತು. ನಕ್ಸಲ್ ಮುಖಂಡನ ಪೋಸ್ಟರ್ ಹಿಡಿದ ಗುಂಪು ಹಿಡ್ಮಾ ಪರ ಘೋಷಣೆ ಕೂಗಿದ ಬಳಿಕ ಪ್ರತಿಭಟನೆ ಹಿಂಸಾತ್ಮಕ ರೂಪಕ್ಕೆ ತಿರುಗಿದೆ ಅನ್ನೋದು ಗೊತ್ತಾಗಿದೆ ಹಿಂಸಾತ್ಮಕ ರೂಪಕ್ಕೆ ತಿರುದ್ದೇಗೆ

ರಾಷ್ಟ್ರ ರಾಜಧಾನಿಯ ಸಿ-ಹೆಕ್ಸಾಗನ್ ಬಳಿ ಭಾನುವಾರ ನಡೆದ ಪ್ರತಿಭಟನೆ ಸಂದರ್ಭದಲ್ಲಿ ಪೊಲೀಸರು ವಾಹನ ಸಂಚಾರಕ್ಕೆ ಅಡ್ಡಿ ಮಾಡದಂತೆ ಪ್ರತಿಭಟನಾಕಾರರಿಗೆ ಎಚ್ಚರಿಸಿದ್ದರು. ಇದರಿಂದ ಅಂಬುಲೆನ್ಸ್ ಮತ್ತು ವೈದ್ಯಕೀಯ ಸಿಬ್ಬಂದಿ ಪ್ರಯಾಣಕ್ಕೆ ತೊಂದರೆಯಾಗಲಿದೆ ಎಂದೂ ತಿಳಿಸಿದ್ದರು. ಇದನ್ನ ಲೆಕ್ಕಿಸಿದ ಪ್ರತಿಭಟನಾಕಾರರನ್ನು ರಸ್ತೆ ತಡೆಗೆ ಮುಂದಾದರು. ಪೊಲೀಸರು ಚದುರಿಸಲು ಯತ್ನಿಸಿದಾಗ ಪೊಲೀಸರತ್ತ ಕೆಲವರು ಪೆಪ್ಪರ್ ಮತ್ತು ಚಿಲ್ಲಿ ಸ್ಪೇ ಬಳಿಸಿದ್ರು. ಬ್ಯಾರಿಕೇಡ್‌ಗಳನ್ನ ಮುರಿದು ಹಲ್ಲೆಗೂ ಯತ್ನಿಸಿದ್ರು. ಇದರಿಂದ ಮೂರ್ನಾಲ್ಕು ಮಂದಿ ಪೊಲೀಸರು ಗಾಯಗೊಂಡಿದ್ದಾರೆ. ಪೆಪ್ಪರ್, ಚಿಲ್ಲಿ ಸ್ಪೇ ಬಳಸಿ ಹಲ್ಲೆಗೆ ಮುಂದಾಗಿದ್ದನ್ನ ಗಂಭೀರವಾಗಿ ಪರಿಗಣಿಸಿದ ಪೊಲೀಸರು, 15 ಜನರನ್ನ ಬಂಧಿಸಿದ್ದಾರೆ.

ನಕ್ಸಲ್ ಮುಖಂಡ ಹಿಡ್ಮಾ ಪೋಸ್ಟರ್ ವಾಯು ಮಾಲಿನ್ಯ ಖಂಡಿಸಿ ನಡೆಯುತ್ತಿದ್ದ ಪ್ರತಿಭಟನೆ ವೇಳೆ ಗುಂಪೊಂದು ಇತ್ತೀಚೆಗೆ ಎನ್‌ಕೌಂಟರ್‌ಗೆ ಬಲಿಯಾದ ನಕ್ಸಲ್ ಮುಖಂಡ ಮಾದ್ವಿ ಹಿಡ್ಮಾನ ಪೋಸ್ಟರ್ ಹಿಡಿದು ಘೋಷಣೆ ಕೂಗಿದ್ದು, ರಸ್ತೆ ತಡೆಗೆ ಮುಂದಾಗಿದ್ದು ಹಿಂಸಾ ರೂಪಕ್ಕೆ ತಿರುಗಲು ಮತ್ತೊಂದು ಕಾರಣ.

## ಕೆರೆ ಮಧ್ಯೆ ತೆಪ್ಪದಲ್ಲಿ ಸಿಲುಕಿದ್ದ ಮಗುವಿನ ರಕ್ಷಣೆ



**ಕೋಲಾರ:** ಕೆರೆಯ ಮಧ್ಯೆ ತೆಪ್ಪದಲ್ಲಿ ಸಿಲುಕಿ ಪರದಾಡುತ್ತಿದ್ದ 3 ವರ್ಷದ ಮಗುವನ್ನ ಅಗ್ನಿಶಾಮಕ ದಳ ಸಿಬ್ಬಂದಿ ರಕ್ಷಣೆ ಮಾಡಿರುವ ಘಟನೆ ಕೋಲಾರದಲ್ಲಿ (Kolar) ನಡೆದಿದೆ. ಕೋಲಾರ ತಾಲೂಕು ಚುಂಚದೇನಹಳ್ಳಿ ಕೆರೆಯ ದಡದಲ್ಲಿ ಆಟವಾಡುತ್ತಿದ್ದ 3 ವರ್ಷದ ಅಮೂಲ್ಯ ತೆಪ್ಪದಲ್ಲಿ ಕೆರೆಯ ಮಧ್ಯೆ ನೀರಿನಲ್ಲಿ ಸಿಲುಕಿದ್ದಳು. ಬೃಹತ್ ಕೆರೆಯ ಮಧ್ಯೆ ತೆಪ್ಪದಲ್ಲಿ ಸಿಲುಕಿದ್ದ ಮಗುವನ್ನ ರಕ್ಷಣೆ ಮಾಡುವುದು ಹರಸಾಹಸವೇ ಆಗಿತ್ತು. ಕೂಡಲೇ ಸ್ಥಳಕ್ಕೆ ಆಗಮಿಸಿದ ಕೋಲಾರ ಗ್ರಾಮಾಂತರ ಪೊಲೀಸರು ಈಜುಗಾರ ನಿಜಾಮುದ್ದೀನ್ ನನ್ನ ಕರೆಸಿ ಮಗುವನ್ನ ರಕ್ಷಣೆ ಮಾಡಲು ಮುಂದಾದರು.

ಆದ್ರೆ ಅವರಿಂದ ಸಾಧ್ಯವಾಗಲಿಲ್ಲ. ಈ ಹಿನ್ನೆಲೆ ಅಗ್ನಿ ಶಾಮಕದಳ ಸಿಬ್ಬಂದಿ ನಾಗಪ್ಪ ನಂದಿ 300 ಮೀ ಕೆರೆಯಲ್ಲಿ ಈಜುವ ಮೂಲಕ ಮಗುವನ್ನ ರಕ್ಷಣೆ ಮಾಡಿದ್ದಾರೆ. ಚಿತ್ರದುರ್ಗ ಮೂಲದ ತಂದೆ ರಂಗಸ್ವಾಮಿ ಹಾಗೂ ತಾಯಿ ಅಂಜಲಿ ದಂಪತಿಯ 3 ವರ್ಷದ ಮಗು ಇದಾಗಿದೆ. ಕೆರೆಯಲ್ಲಿ ಮೀನು ಹಿಡಿಯಲು ಬಂದಿದ್ದ ವೇಳೆ ಕೆರೆಯ ದಡದಲ್ಲಿ ಆಟವಾಡುತ್ತಿದ್ದ ಮಗು ಆಕಸ್ಮಿಕವಾಗಿ ತೆಪ್ಪದಲ್ಲಿ ಕೆರೆಯ ಮಧ್ಯ ಭಾಗಕ್ಕೆ ಹೋಗಿ ಸಿಲುಕಿತ್ತು. ಕೂಡಲೇ ಅಗ್ನಿಶಾಮಕ ದಳ ಸಿಬ್ಬಂದಿ ಸಮಯ ಪ್ರಜ್ಞೆಯಿಂದ ಮಗುವಿನ ರಕ್ಷಣೆ ಮಾ ಡಲಾಗಿದೆ

ಪ್ರಾಣಾಪಾಯದಲ್ಲಿದ್ದ ಮಗುವನ್ನು ಕಾಪಾಡಿದ ಕೋಲಾರ ಗ್ರಾಮಾಂತರ ಪೊಲೀಸರು ಮತ್ತು ಅಗ್ನಿ ಶಾಮಕ ಸಿಬ್ಬಂದಿಗೆ ಸಾರ್ವಜನಿಕರು ಪ್ರಶಂಸೆ ವ್ಯಕ್ತಪಡಿಸಿದ್ದು, ಕೋಲಾರ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ಹೈಕಮಾಂಡ್ ಏನು ತೀರ್ಮಾನ ಮಾಡುತ್ತೆ, ಅದರಂತೆ ನಡೆದುಕೊಳ್ಳುತ್ತೇನೆ-ಸಿಎಂ ಸಿದ್ದರಾಮಯ್ಯ



**ಚಿಕ್ಕಬಳ್ಳಾಪುರ:** ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪುಟ ಪುನಾರ್ಚನೆಯ ವಿಷಯದಲ್ಲಿ ಕಾಂಗ್ರೆಸ್ ಹೈಕಮಾಂಡ್‌ನ ನಿರ್ದೇಶವೇ ಅಂತಿಮ ಎಂದು ಸ್ಪಷ್ಟಪಡಿಸಿದ್ದಾರೆ. ಹೈಕಮಾಂಡ್ 4-5 ತಿಂಗಳ ಹಿಂದೆಯೇ ಸಂಪುಟ ಪುನಾರ್ಚನೆ ಮಾಡಿ ಎಂದಿದ್ದರು. ಆದರೆ ಎರಡೂವರೆ ವರ್ಷ ತುಂಬಲಿ, ಆಮೇಲೆ ಮಾಡೋಣ ಎಂದೆ.

ಹೈಕಮಾಂಡ್ ಏನು ತೀರ್ಮಾನ ಮಾಡುತ್ತಾರೆ, ಅದರಂತೆ ನಡೆದುಕೊಳ್ಳುತ್ತೇನೆ ಎಂದು ಅವರು ಹೇಳಿದ್ದಾರೆ. ಶಿಡ್ಲಘಟ್ಟದಲ್ಲಿ ಹೈಟೆಕ್ ರೇಷ್ಮೆ ಗೂಡು ಮಾರುಕಟ್ಟೆ ಭೂಮಿ ಪೂಜೆಗೆ ಆಗಮಿಸಿದ ಸಂದರ್ಭದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಎರಡೂವರೆ ವರ್ಷ ಆಗಲಿ, ಆಮೇಲೆ ಸಂಪುಟ ಪುನಾರ್ಚನೆ ಮಾಡೋಣ ಅಂತ ಹೇಳಿದ್ದೆ. ಈಗಲೂ ಹೈಕಮಾಂಡ್ ಇರು ಅಂದ್ರೆ ಇರ್ತೀನಿ ಎಂದು ಸ್ಪಷ್ಟಪಡಿಸಿದ್ದಾರೆ. ಕರ್ನಾಟಕ ಕಾಂಗ್ರೆಸ್ ಸರ್ಕಾರ 2023ರ ಮೇನಲ್ಲಿ ಅಧಿಕಾರಕ್ಕೆ ಬಂದಿದ್ದು, ನವೆಂಬರ್ 20ರಂದು 2.5 ವರ್ಷಗಳ ಅವಧಿ ಪೂರ್ಣಗೊಂಡಿದೆ.

ಈ ಹಿನ್ನೆಲೆಯಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಪರಂಪರೆಯ 'ರೋಟೇಷನಲ್ ಸಿಎಂ' ಚರ್ಚೆಗಳು ಸಹ ಹೆಚ್ಚಾಗಿವೆ. ಇನ್ನೂ ಸಿಎಂ ಬದಲಾವಣೆ ಕುರಿತು ಮಾತನಾಡಿದ ಅವರು, ನನ್ನನ್ನೇ ಮುಂದುವರೆಸಿ ಅಂದ್ರೆ ನಾನೇ ಮುಂದುವರೆಯುತ್ತೇನೆ. ಹೈಕಮಾಂಡ್ ಹೇಳಿದ್ರೆ ನಾನು ಒಪ್ಪಿಕೊಳ್ಳಬೇಕು. ಡಿಸಿಎಂ ಡಿ.ಕೆ. ಶಿವಕುಮಾರ್ ಸಹ ಒಪ್ಪಿಕೊಳ್ಳಬೇಕು. ಹೈಕಮಾಂಡ್‌ನೊಂದಿಗೆ ಇತ್ತೀಚೆಗೆ ನಡೆದ ಸಭೆಗಳಲ್ಲಿ ಈ ವಿಷಯ ಚರ್ಚೆಗೆ ಬಂದಿದ್ದು, ರಾಹುಲ್ ಗಾಂಧಿ ಅವರ ಒಪ್ಪಿಗೆಯೊಂದಿಗೆ ಪುನಾರ್ಚನೆಯ ಚಿಂತನೆ ನಡೆಯುತ್ತಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಸರ್ಕಾರದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಮಾತನಾಡಿದ ಸಿಎಂ, ಎಲ್ಲಾ ಜಿಲ್ಲೆಗಳಲ್ಲೂ ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿದ್ದೇವೆ. ಬಿಜೆಪಿಯವರು ದುಡ್ಡು ಇಲ್ಲ ಅಂತಾರೆ. ದುಡ್ಡು ಇಲ್ಲದೆ ಮಾಡೋಕೆ ಆಗುತ್ತಾ ? ಬಿಜೆಪಿಯವರು ಸುಳ್ಳು ಅಪಪ್ರಚಾರ ಮಾಡುತ್ತಾರೆ ಎಂದು ಕಿಡಿಕಾರಿದ್ದಾರೆ. ಎಲ್ಲಾ ಕ್ಷೇತ್ರಗಳಲ್ಲೂ ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿದ್ದೇವೆ. ಬಿಜೆಪಿಯವರಿಗೆ ಸುಳ್ಳೇ ಮನೆ ದೇವರು. ಸುಳ್ಳು ಹೇಳೋದು ಅವರ ಕೆಲಸ ಎಂದು ಟೀಕಿಸಿದರು.

ಹೈಕಮಾಂಡ್‌ನೊಂದಿಗೆ ನಡೆದ ಚರ್ಚೆಗಳಲ್ಲಿ ಗ್ಯಾರಂಟಿ ಯೋಜನೆಗಳಿಗೆ 1 ಲಕ್ಷ ಕೋಟಿ ರೂ. ಖರ್ಚು ಮಾಡಿದ್ದೇವೆ ಎಂದು ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ. ಹೈಕಮಾಂಡ್ ಏನು ಹೇಳುತ್ತಾರೆ, ಅದನ್ನೇ ಕೇಳೋದು ಎಂದು ಅವರು ಹೇಳಿದ್ದಾರೆ. ಇದರೊಂದಿಗೆ, ಸಂಪುಟ ಪುನಾರ್ಚನೆಯಲ್ಲಿ 50% ಸಚಿವರನ್ನು ಬದಲಾಯಿಸುವ ಸಾಧ್ಯತೆಯಿದೆ ಎಂದು ರಾಜಕೀಯ ವರ್ಗಗಳು ಊಹಿಸಿವೆ. ಡಿಸೆಂಬರ್ ಆರಂಭದೊಂದಿಗೆ ಪುನಾರ್ಚನೆ ಘೋಷಣೆಯಾಗಬಹುದು ಎಂದು ಮೂಲಗಳು ತಿಳಿಸಿವೆ. ಕರ್ನಾಟಕ ಕಾಂಗ್ರೆಸ್‌ನಲ್ಲಿ ಸಿದ್ದರಾಮಯ್ಯ-ಶಿವಕುಮಾರ್ ನಡುವಿನ 'ಪವರ್ ಶೇರಿಂಗ್' ಚರ್ಚೆಗಳು ಇತ್ತೀಚೆಗೆ ಹೆಚ್ಚಾಗುತ್ತಿದೆ. 2023ರ ಚುನಾವಣೆಯ ನಂತರ ರೋಟೇಷನಲ್ ಸಿಎಂ ಫಾರ್ಮುಲಾ ಚರ್ಚೆಯಾಗಿದ್ದರೂ, ಸಿದ್ದರಾಮಯ್ಯ ಅವರು ಐದು ವರ್ಷಗಳ ಅವಧಿಯನ್ನು ಒಪ್ಪಿಕೊಂಡಿದ್ದಾರೆ. ಆದರೆ, ಶಿವಕುಮಾರ್ ಅವರ ಬೆಂಬಲಿಗರು ದೆಹಲಿಯಲ್ಲಿ ಕ್ಯಾಂಪ್ ಮಾಡಿ ಹೈಕಮಾಂಡ್‌ನೊಂದಿಗೆ ಚರ್ಚೆ ನಡೆಸುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಅವರ ಈ ಹೇಳಿಕೆಯು ರಾಜಕೀಯ ವಲಯದಲ್ಲಿ ದೊಡ್ಡ ಚರ್ಚೆಗೆ ಕಾರಣವಾಗಿದೆ. ಒಟ್ಟಾರೆಯಾಗಿ, ಸಂಪುಟ ಪುನಾರ್ಚನೆಯ ಚಿಂತನೆಯಲ್ಲಿ ಹೈಕಮಾಂಡ್‌ನ ನಿರ್ದೇಶವೇ ಅಂತಿಮ ಎಂದು ಸಿದ್ದರಾಮಯ್ಯ ಅವರು ಸ್ಪಷ್ಟಪಡಿಸಿದ್ದಾರೆ. ಇಲ್ಲಿಗೆ ಇದು ಮುಗಿಯುತ್ತದೆಯೇ ಅಥವಾ ಕುರ್ಚಿ ಕದನ ಮುಂದುವರೆಯುತ್ತದೆಯೋ ಕಾದು ನೋಡಬೇಕಿದೆ.

## ರೈಲಿನಲ್ಲಿ ಎಲೆಕ್ಟ್ರಿಕ್ ಕೆಟಲ್‌ನಿಂದ ಮ್ಯಾಗಿ ಮಾಡಿದ ಮಹಿಳೆ ವಿರುದ್ಧ ಕೇಸ್



**ಮುಂಬೈ:** ರೈಲ್ವೆ ನಿಯಮಗಳನ್ನು ಸಂಪೂರ್ಣವಾಗಿ ಅವಹೇಳಿಸಿದ ಘಟನೆ ಸಾಮಾಜಿಕ ಜಾಲತಾಣಗಳಲ್ಲಿ ಚರ್ಚೆಯ ವಿಷಯವಾಗಿದೆ. ಮುಂಬೈನ ಒಂದು ಎಕ್ಸ್ಪ್ರೆಸ್ ರೈಲಿನ ಎಸಿ ಕೋಚ್‌ನೊಳಗೆ ಒಬ್ಬ ಮಹಿಳೆ ಎಲೆಕ್ಟ್ರಿಕ್ ಕೆಟಲ್ ಬಳಸಿ ನೂಡಲ್ಸ್‌ತಯಾರಿಸಿದ್ದು, ಈ ಘಟನೆಯ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಬಳಿಕ ಪೊಲೀಸರು ಈ ಬಗ್ಗೆ ಕ್ರಮ ಕೈಗೊಂಡಿದ್ದಾರೆ. ವೈ ರ ಲ್ ಆಗಿರುವ ವೀಡಿಯೋದಲ್ಲಿ, ರೈಲು ಪ್ರಯಾಣಿಸುತ್ತಿರುವಾಗ, ಒಬ್ಬ ಮಹಿಳೆ ರೈಲಿನ ಕೋಚ್‌ನಲ್ಲಿರುವ ಮೊಬೈಲ್ ಚಾರ್ಜಿಂಗ್ ಸಾಕೆಟ್‌ಗೆ ತನ್ನ ಎಲೆಕ್ಟ್ರಿಕ್ ಕೆಟಲ್ ಅನ್ನು ಪ್ಲಗ್ ಮಾಡಿದ್ದಾರೆ. ನಂತರ ಕೆಟಲ್‌ನಲ್ಲಿ ನೀರು ಕಾಯಿಸಿ, ಅದರೊಳಗೆ ಮ್ಯಾಗಿ ನೂಡಲ್ಸ್ ಮಾಡುತ್ತಿರುವ ದೃಶ್ಯವು ವಿಡಿಯೋದಲ್ಲಿ ಕಾಣಿಸುತ್ತದೆ. ಮಹಿಳೆ ಮರಾಠಿ ಭಾಷೆಯಲ್ಲಿ ಮಾತನಾಡುತ್ತಾ ಮ್ಯಾಗಿ ಮಾಡಿದ್ದಾರೆ.

ಮಹಿಳೆಯೇ ಹೇಳಿದಂತೆ, ತಾನು ಈ ರೀತಿ ಕೆಟಲ್ ಬಳಸಿ 10-15 ಜನರಿಗೆ ಚಹಾ ಸಹ ತಯಾರಿಸಿ ರುವುದಾಗಿ ಹೇಳಿಕೊಂಡಿದ್ದಾರೆ. ಆದಾಗ್ಯೂ, ಈ ರೀತಿ ರೈಲಿನಲ್ಲಿ ಕಟಲ್ ಬಳಸುವುದು ಸುರಕ್ಷತಾ ಅಪಾಯಕ್ಕೆ ಕಾರಣವಾಗಬಹುದು. ರೈಲ್ವೆ ವ್ಯವಸ್ಥೆಯ ವಿದ್ಯುತ್ ಸರಬರಾಜು ಸಾಮಾನ್ಯ ಗೃಹೋಪಯೋಗಿ ವಿದ್ಯುತ್‌ಗಿಂತ ಭಿನ್ನವಾಗಿದ್ದು, ಕೆಟಲ್‌ನಂತಹ ಹೆಚ್ಚಿನ ವಿದ್ಯುತ್ ಬಳಕೆಯ ಸಾಧನಗಳನ್ನು ಬಳಸುವುದರಿಂದ ಶಾರ್ಟ್ ಸರ್ಕ್ಯೂಟ್, ತಂತಿ ಬೆಂಕಿ, ಅಥವಾ ವಿದ್ಯುತ್ ಆಪಾಯದಂತ ಘಟನೆಯಾಗಿವ ಸಾಧ್ಯತೆ ಇದೆ. ಇದು ಕೇವಲ ಆ ಮಹಿಳೆಯವರಿಗೆ ಮಾತ್ರವಲ್ಲದೆ, ಆ ಕೋಚ್‌ನಲ್ಲಿರುವ ಎಲ್ಲಾ ಪ್ರಯಾಣಿಕರ ಜೀವಕ್ಕೆ ಅಪಾಯವನ್ನು ಉಂಟುಮಾಡುವ ಸಂಭವ ಇದೆ. ರೈಲ್ವೆ ಅಧಿಕಾರಿಗಳ ಕ್ರಮ

ಈ ವೈರಲ್ ವೀಡಿಯೋವು ರೈಲ್ವೆ ಅಧಿಕಾರಿಗಳ ಗಮನಕ್ಕೆ ಬಂದ ನಂತರ, ಅವರು ತ್ವರಿತ ಕ್ರಮ ಜರುಗಿಸಿದ್ದಾರೆ. ಮಹಿಳೆಯ ವಿರುದ್ಧ ಅಧಿಕೃತವಾಗಿ ಕೇಸ್ ದಾಖಲಾಗಿದೆ ಎಂದು ರೈಲ್ವೆ ಇಲಾಖೆ ಖಚಿತಪಡಿಸಿದೆ. ಅವರ ವಿರುದ್ಧ ರೈಲ್ವೆ ಕಾಯ್ದೆಯ ಸೆಕ್ಷನ್ 147(1) ಅಡಿಯಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು.

ರೈಲ್ವೆ ಕಾಯ್ದೆಯ ಸೆಕ್ಷನ್ 147(1) ಪ್ರಕಾರ, ರೈಲ್ವೆ ಆಸ್ತಿಯನ್ನು ನಷ್ಟಪಡಿಸುವ, ಹಾನಿ ಮಾಡುವ ಉಪಕರಣ ಬಳಸುವುದು ದಂಡಾರ್ಹ ಅಪರಾಧವಾಗಿದೆ. ಈ ನಿಯಮ ಉಲ್ಲಂಘನೆಯಾದರೆ, ದಂಡ ಅಥವಾ ಜೈಲು ಶಿಕ್ಷೆಗೆ ಗುರಿಯಾಗಬಹುದು.

ಈ ಘಟನೆಯು ಸಾರ್ವಜನಿಕ ಸ್ಥಳಗಳಲ್ಲಿ ವ್ಯಕ್ತಿಗಳ ಹೊಣೆಗಾರಿಕೆ ಮತ್ತು ಸಾರ್ವಜನಿಕ ಸಂಪತ್ತಿನ ಪರಿಪಾಲನೆ ಬಗ್ಗೆ ಮತ್ತೆ ಚರ್ಚೆಯನ್ನು ಪ್ರಾರಂಭಿಸಿದೆ. ರೈಲ್ವೆ ನಿಯಮಗಳು ಎಲ್ಲಾ ಪ್ರಯಾಣಿಕರ ಸುರಕ್ಷತೆ ಮತ್ತು ಸೌಕರ್ಯವನ್ನು ಖಾತರಿಪಡಿಸುವ ಉದ್ದೇಶದಿಂದ ಮಾಡಲ್ಪಟ್ಟಿವೆ. ಅಂತಹ ನಿಯಮಗಳನ್ನು ಉಲ್ಲಂಘಿಸುವುದು ಸ್ವತಃ ಅಪಾಯಕಾರಿ ಮಾತ್ರವಲ್ಲ, ಇತರ ಪ್ರಯಾಣಿಕರ ಜೀವನವನ್ನೂ ಅಪಾಯಕ್ಕೆ ಈಡುಮಾಡುವ ಸಮಾನವಾಗಿದೆ.

## ₹262 ಕೋಟಿ ಮೌಲ್ಯದ 328 ಕೆಜಿ ಮೆಥಾಂಫೆಟಮೈನ್ ವಶಪಡಿಸಿಕೊಂಡ NCB & ಪೊಲೀಸರು



**ನವದೆಹಲಿ:** ಮಾದಕ ದ್ರವ್ಯ ನಿಯಂ ತ್ರಣ ಬ್ಯೂರೋ (NCB) ಮತ್ತು ದೆಹಲಿ ಪೊಲೀಸರ ಜಂಟಿ ಕಾರ್ಯಾಚರಣೆಯಲ್ಲಿ ರಾಷ್ಟ್ರ ರಾಜಧಾನಿಯಲ್ಲಿ ಈ ಬಾರಿ ಅತಿದೊಡ್ಡ ಮಟ್ಟದ ಡ್ರಗ್ಸ್ ಸಿಕ್ಕಿದೆ. ನೋಯ್ಡಾ, ಗ್ರೇಟರ್ ನೋಯ್ಡಾ ಮತ್ತು ದೆಹಲಿ ಸುತ್ತಮುತ್ತಲಿನ ಪ್ರದೇಶಗಳಲ್ಲಿ ನಡೆಸಿದ ದಾಳಿಯಲ್ಲಿ ₹262 ಕೋಟಿ ಮೌಲ್ಯದ 328 ಕೆಜಿ ಮೆಥಾಂಫೆಟಮೈನ್ (ಮೆಥ್ / ಐಸ್) ಜಪ್ತಿ ಮಾಡಲಾಗಿದೆ. ಈ ಪ್ರಕರಣದಲ್ಲಿ ಇಬ್ಬರು ಆರೋಪಿಗಳನ್ನು ಬಂಧಿಸಲಾಗಿದೆ.

ಈ ದಾಖಲೆಯ ಜಪ್ತಿಯನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ತಮ್ಮ X ಖಾತೆಯಲ್ಲಿ ಹಂಚಿಕೊಂಡು, ನಮ್ಮ ಸರ್ಕಾರವು ಅಭೂತಪೂರ್ವ ವೇಗದಲ್ಲಿ ಮಾದಕ ವಸ್ತುಗಳ ಜಾಲಗಳನ್ನು ನಾಶಪಡಿಸುತ್ತಿದೆ. ಮಾದಕ ವಸ್ತುಗಳ ತನಿಖೆಗೆ ಮೇಲಿನಿಂದ ಕೆಳಕ್ಕೆ ಮತ್ತು ಕೆಳಗಿನಿಂದ ಮೇಲಕ್ಕೆ ವಿಧಾನವನ್ನು ತೀವ್ರವಾಗಿ ಅನುಸರಿಸುತ್ತಾ, ನವದೆಹಲಿಯಲ್ಲಿ ₹262 ಕೋಟಿ ಮೌಲ್ಯದ 328 ಕೆಜಿ ಮೆಥಾಂಫೆಟಮೈನ್ ಅನ್ನು ವಶಪಡಿಸಿಕೊಂಡು ಇಬ್ಬರನ್ನು ಬಂಧಿಸುವ ಮೂಲಕ ಪ್ರಗತಿ ಸಾಧಿಸಲಾಗಿದೆ. ಪ್ರಧಾನಿ ಮೋದಿ ಅವರ ಮಾದಕ ವಸ್ತು ಮುಕ್ತ ಭಾರತಕ್ಕಾಗಿನ ದೃಷ್ಟಿಕೋನವನ್ನು ಸಾಧಿಸಲು ಈ ಕಾರ್ಯಾಚರಣೆಯು ಬಹು-ಸಂಸ್ಥೆಗಳ ಸಮನ್ವಯದ ಅದ್ಭುತ ಉದಾಹರಣೆಯಾಗಿದೆ. ಎನ್‌ಸಿಬಿ ಮತ್ತು ದೆಹಲಿ ಪೊಲೀಸರ ಜಂಟಿ ತಂಡಕ್ಕೆ ಅಭಿನಂದನೆಗಳು ಎಂದು ಎನ್‌ಸಿಬಿ ಮತ್ತು ದೆಹಲಿ ಪೊಲೀಸರ ಜಂಟಿ ತಂಡಕ್ಕೆ ಶುಭಕೋರಿದ್ದಾರೆ.

NCB ಉಪನಿರ್ದೇಶಕ ಜ್ಞಾನೇಶ್ವರ್ ಸಿಂಗ್ ನೇತೃತ್ವದಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ ಗುಪ್ತಚರ ಮಾಹಿತಿ ಆಧರಿಸಿ ನೋಯ್ಡಾದ ಸೆಕ್ಟರ್-122ರ ಗೋದಾಮಿನಲ್ಲಿ ಭಾರೀ ಪ್ರಮಾಣದ ಮೆಥಾಂಫೆಟಮೈನ್ ಶೇಖರಣೆ ಇರುವ ಬಗ್ಗೆ ತಿಳಿದು ದಾಳಿ ನಡೆಸಲಾಯಿತು. ಇದು ದೆಹಲಿ-NCRದಲ್ಲಿ ಒಂದೇ ಕಡೆ ಸಿಕ್ಕ ಅತಿ ಹೆಚ್ಚು ಪ್ರಮಾಣದ ಮೆಥ್ ಎಂದು ಪೊಲೀಸರು ತಿಳಿಸಿದ್ದಾರೆ.ಈ ಘಟನೆಯಲ್ಲಿ ರಾಹುಲ್ ಶರ್ಮಾ (35), ನೋಯ್ಡಾ ನಿವಾಸಿ, ಈತ ಮುಖ್ಯ ಡ್ರಗ್ಸ್ ಸಾಗಾಟಗಾರ ಎಂದು ತಿಳಿದುಬಂದಿದೆ. ಈತನ ಜೊತೆಗೆ ಸುರೇಶ್ ಕುಮಾರ್ (42), ಹರಿಯಾಣ ನಿವಾಸಿಯಾಫಿದ್ದು, ಗೋದಾಮು ಮಾಲೀಕನಾಗಿದ್ದಾನೆ. ಆರಂಭಿಕ ತನಿಖೆಯಲ್ಲಿ ಈ ಡ್ರಗ್ಸ್ ಮ್ಯಾನ್ಮಾರ್-ಥಾಯ್ಲೆಂಡ್ ಮಾರ್ಗವಾಗಿ ಭಾರತಕ್ಕೆ ಸಾಗಾಟವಾಗಿದ್ದು, ದೆಹಲಿ-NCR, ಪಂಜಾಬ್, ಹರಿಯಾಣ ಮತ್ತು ಉತ್ತರ ಪ್ರದೇಶದಲ್ಲಿ ಮಾರಾಟ ಮಾಡಲು ತಯಾರಿ ನಡೆದಿತ್ತು ಎಂಬುದು ಬಯಲಾಗಿದೆ.

ಈ ಜಾಲದಲ್ಲಿ ಇನ್ನೂ ಆರು-ಏಳು ಜನ ಭಾಗಿಯಾಗಿದ್ದು, ಅವರ ಬಂಧನಕ್ಕೆ ದಾಳಿ ನಡೆಯುತ್ತಿದೆ. ಈ ವರ್ಷದ ಆರಂಭದಿಂದೀಚೆಗೆ NCB ಮತ್ತು ಇತರ ಸಂಸ್ಥೆಗಳು ದೇಶಾದ್ಯಂತ ಸುಮಾರು ₹25,000 ಕೋಟಿಗೂ ಹೆಚ್ಚು ಮೌಲ್ಯದ ಮಾದಕ ದ್ರವ್ಯ ಜಪ್ತಿ ಮಾಡಿವೆ. ಗುಜರಾತ್‌ನ ಮುಂದ್ರಾ ಬಂದರಿನಲ್ಲಿ 3,000 ಕೆಜಿ ಹೆರಾಯಿನ್, ದೆಹಲಿ-ಪಂಜಾಬ್‌ನಲ್ಲಿ ಹಲವು ಟನ್ ಗಾಂಜಾ-ಚರಸ್ ಜಪ್ತಿ ನಂತರ ಈ 328 ಕೆಜಿ ಮೆಥ್ ಜಪ್ತಿ ಇದೀಗ ಮತ್ತೊಂದು ದೊಡ್ಡ ಯಶಸ್ಸು ಎಂದು ಗೃಹ ಸಚಿವಾಲಯದ ಅಧಿಕಾರಿಗಳು ತಿಳಿಸಿದ್ದಾರೆ. ದೆಹಲಿ ಪೊಲೀಸ್ ಆಯುಕ್ತ ಸಂಜಯ್ ಅರೋರಾ ಮತ್ತು NCB ಡಿಜಿ ರಾಜೇಶ್ ಕುಮಾರ್ ಅವರ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆದಿದ್ದು, ಮುಂದಿನ ದಿನಗಳಲ್ಲಿ ಇದರ ಜಾಗತಿಕ ಜಾಲದ ಬಗ್ಗೆ ಹೆಚ್ಚಿನ ಮಾಹಿತಿ ಬಹಿರಂಗವಾಗಲಿದೆ ಎಂದು ತಿಳಿದುಬಂದಿದೆ.

## ಗಾಜಾ ಮೇಲೆ ಇಸ್ರೇಲ್ ಮತ್ತೆ ಭೀಕರ ದಾಳಿ 24 ಪ್ಯಾಲೆಸ್ಟೀನಿಯರು ಸಾ*ವು



**ಗಾಜಾ:** ಅಮೆರಿಕ ಮಧ್ಯಸ್ಥಿಕೆಯಲ್ಲಿ ಇಸ್ರೇಲ್-ಹಮಾಸ್ ನಡುವೆ ಘೋಷಿತವಾದ ಕದನವಿರಾಮ ಕೇವಲ 45 ದಿನಗಳಲ್ಲೇ ತತ್ತರಿಸಿದೆ. ಶನಿವಾರ (ನವೆಂಬರ್ 23) ಬೆಳಗ್ಗೆಯಿಂದಲೇ ಇಸ್ರೇಲಿ ಡ್ರೋನ್‌ಗಳು ಮತ್ತು ಯುದ್ಧ ವಿಮಾನಗಳು ಗಾಜಾ ಪಟ್ಟಿಯ ದಕ್ಷಿಣ ಭಾಗದಲ್ಲಿ ತೀವ್ರ ಗುಂಡಿನ ಚಕಮಕಿ ಮತ್ತು ಕ್ಷಿಪಣಿ ದಾಳಿ ನಡೆಸಿದ್ದು, ಕನಿಷ್ಠ 24 ಪ್ಯಾಲೆಸ್ಟೀನಿಯನ್ನರು ಸಾವನ್ನಪ್ಪಿದ್ದಾರೆ, 80ಕ್ಕೂ ಹೆಚ್ಚು ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಹಮಾಸ್ ನಡೆಸುತ್ತಿರುವ ಗಾಜಾ ಆರೋಗ್ಯ ಇಲಾಖೆ ತಿಳಿಸಿದೆ.

ಇಸ್ರೇಲಿ ಸೇನೆ (IDF) ತನ್ನ ಹೇಳಿಕೆಯಲ್ಲಿ, "ದಕ್ಷಿಣ ಗಾಜಾದ ಖಾನ್ ಯೂನಿಸ್ ಮತ್ತು ರಫಾ ಪ್ರದೇಶದಲ್ಲಿ ಇಸ್ರೇಲಿ ಸೈನಿಕರ ಮೇಲೆ ಹಮಾಸ್ ಉಗ್ರರು ಆರ್‌ಪಿಜಿ ಮತ್ತು ಯಂತ್ರಗುಂಡು ದಾಳಿ ನಡೆಸಿದ್ದಕ್ಕೆ ಪ್ರತಿಯಾಗಿ ಉಗ್ರರ ಗುಂಪುಗಳು, ಆಯುಧ ಡಿಪೋಗಳು ಮತ್ತು ಭೂಗತ ಸುರಂಗಗಳನ್ನು ಗುರಿಯಾಗಿಸಿ ದಾಳಿ ನಡೆಸಲಾಗಿದೆ" ಎಂದು ಹೇಳಿಕೊಂಡಿದೆ. ಆದರೆ ದಾಳಿಗೊಳಗಾದ ಪ್ರದೇಶಗಳಲ್ಲಿ ಹಲವು ನಿರಾಶ್ರಿತ ಶಿಬಿರಗಳು ಮತ್ತು ವಾಸದ ಮನೆಗಳು ಧ್ವಂಸವಾಗಿರುವುದು ವರದಿಯಾಗಿದೆ. 10ರ ಕದನವಿರಾಮ ಒಪ್ಪಂದದ ನಂತರ ಇದು ಇಸ್ರೇಲ್ ನಡೆಸಿದ ಅತಿ ದೊಡ್ಡ ಏಕದಿನ ದಾಳಿ ಎಂದು ಪರಿಗಣಿಸಲಾಗಿದೆ. ಕದನವಿರಾಮ ಜಾರಿಗೆ ಬಂದ ನಂತರ ಒಟ್ಟು 312 ಪ್ಯಾಲೆಸ್ಟೀನಿಯನ್ನರು ಇಸ್ರೇಲಿ ದಾಳಿಗಳಲ್ಲಿ ಸಾವನ್ನಪ್ಪಿದ್ದಾರೆ ಎಂದು ಗಾಜಾ ಆರೋಗ್ಯ ಸಚಿವಾಲಯ ಆರೋಪಿಸಿದೆ. "ಇದು ಕದನವಿರಾಮದ ಸ್ಪಷ್ಟ ಉಲ್ಲಂಘನೆ. ಇಸ್ರೇಲ್ ಒಪ್ಪಂದದ ಎಲ್ಲ ನಿಯಮಗಳನ್ನು ತಿರಸ್ಕರಿಸುತ್ತಿದೆ" ಎಂದು ಹಮಾಸ್ ಮಾತನಾಡುವವರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಕ್ಟೋಬರ್ 13ರಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಏರ್ ಫೋರ್ಸ್ ಒನ್‌ನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡುತ್ತಾ, "ಗಾಜಾ ಯುದ್ಧ ಸಂಪೂರ್ಣ ಮುಗಿಯಿತು. ಇಸ್ರೇಲ್-ಹಮಾಸ್ ಸಂಘರ್ಷಕ್ಕೆ ತಾತ್ಕಾಲಿಕವಲ್ಲ, ಶಾಶ್ವತವಾಗಿ ಅಂತ್ಯವಾಯಿತು. ಯಹೂದಿಗಳು, ಮುಸ್ಲಿಮರು, ಅರಬ್ಬರು – ಎಲ್ಲರೂ ಈಗ ಸಂತೋಷದಿಂದ ಇದ್ದಾರೆ ಎಂದು ಘೋಷಿಸಿದ್ದರು. ಆದರೆ ಕೇವಲ 40 ದಿನಗಳಲ್ಲೇ ಆ ಘೋಷಣೆಗೆ ಗಾಜಾದಲ್ಲಿ ಸಿಡಿದ ಗುಂಡುಗಳು ಮತ್ತು ಕ್ಷಿಪಣಿಗಳು ಗುಂಡಿಕೊಟ್ಟಿವೆ.

ಹಮಾಸ್ ಈಗಾಗಲೇ 2023ರ ಅಕ್ಟೋಬರ್ 7ರ ದಾಳಿಯಲ್ಲಿ ಒತ್ತೆಯಾಳುಗಳಾಗಿದ್ದ 110ಕ್ಕೂ ಹೆಚ್ಚು ಇಸ್ರೇಲಿ ಮತ್ತು ವಿದೇಶಿ ನಾಗರಿಕರನ್ನು ಬಿಡುಗಡೆ ಮಾಡಿತ್ತು. ಆದರೆ ಇಸ್ರೇಲ್ ತನ್ನ ಭಾಗದ ಒಪ್ಪಂದದಂತೆ 1,900ಕ್ಕೂ ಹೆಚ್ಚು ಪ್ಯಾಲೆಸ್ಟೀನಿ ಕೈದಿಗಳನ್ನು ಬಿಡುಗಡೆ ಮಾಡಿಲ್ಲ ಎಂಬ ಆರೋಪವೂ ಎದ್ದಿದೆ. ಈ ಹಿನ್ನೆಲೆಯಲ್ಲೇ ಸಣ್ಣಪುಟ್ಟ ಘರ್ಷಣೆಗಳು ನಡೆಯುತ್ತಿದ್ದವು.

ಈ ದಾಳಿಯ ನಂತರ ಹಮಾಸ್ ಇಸ್ರೇಲ್ ಯುದ್ಧವನ್ನು ಮತ್ತೆ ಆರಂಭಿಸಲು ಬಯಸುತ್ತಿದೆ. ಆದರೆ ನಾವು ರಕ್ಷಣೆಗಾಗಿ ಸಿದ್ಧರಿದ್ದೇವೆ ಎಂದು ಪ್ರತಿಕ್ರಿಯಿಸಿದೆ. ಕತಾರ್ ಮತ್ತು ಈಜಿಪ್ಟ್ ಮಧ್ಯಸ್ಥರು ತುರ್ತು ಸಂಪರ್ಕದಲ್ಲಿದ್ದು, ಪರಿಸ್ಥಿತಿಯನ್ನು ನಿಯಂತ್ರಿಸಲು ಯತ್ನಿಸುತ್ತಿದ್ದಾರೆ ಎನ್ನಲಾಗಿದೆ.

## COP30 ಶೃಂಗಸಭೆಯಲ್ಲಿ ಬೆಂಕಿ ಅವಘಡ: 21 ಜನರಿಗೆ ಗಾಯ

**ಬೆಲೆಮ್:** ಬ್ರೆಜಿಲ್‌ನ ಬೆಲೆಮ್ ನಗರದಲ್ಲಿ ನಡೆಯುತ್ತಿರುವ ಯುಎನ್ ಹವಾಮಾನ ಶೃಂಗಸಭೆ COP30ರ ಮುಖ್ಯ ಸ್ಥಳದಲ್ಲಿ ಆಕಸ್ಮಿಕ ಬೆಂಕಿ ಅವಘಡ ಸಂಭವಿಸಿ ಭಾರೀ ಆತಂಕ ಮೂಡಿಸಿದೆ. 'ಬ್ಲೂ ಝೋನ್' ಎಂಬ ಹೆಸರಿನ ಪ್ರದೇಶದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು,

ಈ ಭಾಗದಲ್ಲಿ ಮುಖ್ಯ ಸಭಾಂಗಣ, ಎಲ್ಲ ದೇಶಗಳ ಪೆವಿಲಿಯನ್‌ಗಳು, ಮಾಧ್ಯಮ ಕೇಂದ್ರ, ಉನ್ನತ ಮಟ್ಟದ ಗಣ್ಯರ ಸಭೆಗಳು ಮತ್ತು ಕಚೇರಿಗಳಿವೆ. ಬೆಂಕಿಯಿಂದ ಕನಿಷ್ಠ 21 ಜನರು ಗಾಯಗೊಂಡಿದ್ದು, ಅವರೆಲ್ಲರನ್ನೂ ತಕ್ಷಣ ಆಸ್ಪತ್ರೆಗೆ ಸ್ಥಳಾಂತರಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಗಾಯಾಳುಗಳ ಪೈಕಿ ಯಾರ ಪರಿಸ್ಥಿತಿಯೂ ಗಂಭೀರವಲ್ಲ ಎಂದು ವೈದ್ಯರು ತಿಳಿಸಿದ್ದಾರೆ.

ಬೆಂಕಿ ಆರಂಭವಾದ ತಕ್ಷಣವೇ ಸೈರನ್‌ಗಳು ಮೊಳಗಿ, ಸಾವಿರಾರು ಪ್ರತಿನಿಧಿಗಳು, ಮಾಧ್ಯಮ ವ್ಯಕ್ತಿಗಳು, ಸಿಬ್ಬಂದಿ ಮತ್ತು ಸ್ವಯಂಸೇವಕರು ಆತಂಕದಿಂದ ಎಲ್ಲ ನಿರ್ಗಮನ ದ್ವಾರಗಳ ಕಡೆಗೆ ಓಡಿದರು. ಹೊಗೆಯಿಂದ ಕೆಲವರು ಉಸಿರುಗಟ್ಟಿತ್ತು ಹೀಗಾಗಿ ಅವರಿಗೆಲ್ಲಾ ಸ್ಥಳದಲ್ಲಿಯೇ ಆಕ್ಸಿಜನ್ ಒದಗಿಸಲಾಯಿತು. ಬ್ರೆಜಿಲ್‌ನ ಅಗ್ನಿಶಾಮಕ ದಳ ಮತ್ತು ಪೊಲೀಸರು ತಕ್ಷಣ ಕಾರ್ಯಾಚರಣೆ ಆರಂಭಿಸಿ, ಬೆಂಕಿಯನ್ನು ಆರು ಗಂಟೆಗಳ ತೀವ್ರ ಹೋರಾಟದ ನಂತರ ನಿಯಂತ್ರಿಸಿದರು. ಬೆಂಕಿ

ಆರಂಭವಾದುದು 'ಬ್ಲೂ ಝೋನ್'ನ ತಾಂತ್ರಿಕ ವಿಭಾಗದಲ್ಲಿರುವ ವಿದ್ಯುತ್ ಸರಬರಾಜು ವ್ಯವಸ್ಥೆಯ ಶಾರ್ಟ್ ಸರ್ಕ್ಯೂಟ್‌ನಿಂದ ಎಂದು ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ.

ಆದರೆ ಇದು ದುರ್ಘಟನೆಯೇ ಆಗಿದೆಯೇ ಅಥವಾ ಯಾವುದೇ ಷಡ್ಯಂತರವಿದೆಯೇ ಎಂಬುದನ್ನು ಖಚಿತಪಡಿಸಲು ಬ್ರೆಜಿಲ್ ಸರ್ಕಾರವು ಉನ್ನತ ಮಟ್ಟದ ತನಿಖಾ ತಂಡವನ್ನು ರಚಿಸಿದೆ. COP30ರ ಆಯೋಜ ಕರಾದ ಯುಎನ್‌ಎಫ್‌ಸಿಸಿಸಿ) ಕೂಡ ಈ ಘಟನೆಯ ಬಗ್ಗೆ ಆಘಾತ ವ್ಯಕ್ತಪಡಿಸಿದೆ.

## ಅಯೋಧ್ಯೆಗೆ ಪ್ರಧಾನಿ ಮೋದಿ ಭೇಟಿ; ರಾಮ ಮಂದಿರದ ಶಿಖರದ ಮೇಲೆ ಹಾರಲಿದೆ ಕೇಸರಿ ಬಾವುಟ



**ಅಯೋಧ್ಯೆ:** ಪ್ರಧಾನಿ ನರೇಂದ್ರ ಮೋದಿ ನವೆಂಬರ್ 25ರಂದು ಉತ್ತರ ಪ್ರದೇಶದ ಅಯೋಧ್ಯೆಯಲ್ಲಿರುವ ರಾಮ ಮಂದಿರಕ್ಕೆ ಭೇಟಿ ನೀಡಲಿದ್ದಾರೆ. ಈ ಭೇಟಿ ಮಾರ್ಗಶಿರ ಮಾಸದ ಶುಕ್ಲ ಪಕ್ಷದ ಪಂಚಮಿಯ ಹಿನ್ನೆಲೆಯಲ್ಲಿ ವಿಶೇಷವಾಗಿದೆ. ಇದು ಭಗವಾನ್ ರಾಮ ಮತ್ತು ಸೀತಾ ದೇವಿಯ ವಿವಾಹ ಪಂಚಮಿಯ ಅಭಿಜಿತ್ ಮುಹೂರ್ತ ದೊಂದಿಗೆ ಹೊಂದಿಕೆಯಾಗುತ್ತದೆ. ಈ ದಿನಾಂಕವು 17ನೇ ಶತಮಾನದಲ್ಲಿ 48 ಗಂಟೆಗಳ ಕಾಲ ಅಯೋಧ್ಯೆಯಲ್ಲಿ ಧ್ಯಾನ ಮಾಡಿದ ಒಂಬತ್ತನೇ ಸಿಖ್ ಗುರು ಗುರು ತೇಜ್ ಬಹದ್ದೂರ್ ಅವರ ಹುತಾತ್ಮ ದಿನವನ್ನು ಸಹ ಸೂಚಿಸುತ್ತದೆ. ಹೀಗಾಗಿ, ಆಧ್ಯಾತ್ಮಿಕ ವಾಗಿ ಈ ದಿನ ಬಹಳ ಮಹತ್ವವನ್ನು ಹೊಂದಿದೆ.

ನಾಳೆ ಬೆಳಿಗ್ಗೆ 10 ಗಂಟೆ ಸುಮಾರಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಮಹರ್ಷಿ ವಶಿಷ್ಠ, ಮಹರ್ಷಿ ವಿಶ್ವಾಮಿತ್ರ, ಮಹರ್ಷಿ ಅಗಸ್ತ್ಯ, ಮಹರ್ಷಿ ವಾಲ್ಮೀಕಿ, ದೇವಿ ಅಹಲ್ಯ, ನಿಷಾದರಾಜ್ ಗುಹಾ ಮತ್ತು ಮಾತಾ ಶಬರಿಗೆ ಸಮರ್ಪಿತವಾದ ದೇವಾಲಯಗಳನ್ನು ಹೊಂದಿರುವ ಸಪ್ತಮಂದಿರಕ್ಕೆ ಭೇಟಿ ನೀಡಲಿದ್ದಾರೆ.

ಇದಾದ ನಂತರ ಬೆಳಿಗ್ಗೆ 11 ಗಂಟೆ ಸುಮಾರಿಗೆ ಶೇಷಾವತಾರ ಮಂದಿರ ಮತ್ತು ಮಾತಾ ಅನ್ನಪೂರ್ಣ ಮಂದಿರಕ್ಕೆ ಭೇಟಿ ನೀಡಲಿದ್ದಾರೆ. ಪ್ರಧಾನಿ ಮೋದಿ ಅವರು ರಾಮ ದರ್ಬಾರ್ ಗರ್ಭಗೃಹ ಮತ್ತು ರಾಮ ಲಲ್ಲಾ ಗರ್ಭಗೃಹದಲ್ಲಿ ದರ್ಶನ ಮತ್ತು ಪೂಜೆಯನ್ನು ನೆರವೇರಿಸಲಿದ್ದಾರೆ. ನಾಳೆ ಮಧ್ಯಾಹ್ನ 12 ಗಂಟೆಗೆ ಪ್ರಧಾನಮಂತ್ರಿ ಮೋದಿ ಶ್ರೀ ರಾಮ ಜನ್ಮಭೂಮಿ ಮಂದಿರದ ಶಿಖರದ ಮೇಲೆ 10 ಅಡಿ x 20 ಅಡಿ ಉದ್ದದ ಕೇಸರಿ ಧ್ವಜವನ್ನು ಹಾರಿಸಲಿದ್ದಾರೆ. ಇದು ಈ ದೇವಾಲಯದ ನಿರ್ಮಾಣ ಪೂರ್ಣಗೊಂಡಿ ರುವುದನ್ನು, ಸಾಂಸ್ಕೃತಿಕ ಆಚರಣೆ ಮತ್ತು ರಾಷ್ಟ್ರೀಯ ಏಕತೆಯ ಹೊಸ ಅಧ್ಯಾಯ ವನ್ನು ಪ್ರಾರಂಭಿಸು ವುದನ್ನು ಸಂಕೇತಿಸುತ್ತದೆ.

ಈ ಕೇಸರಿ ಧ್ವಜವು ಭಗವಾನ್ ಶ್ರೀ ರಾಮನ ತೇಜಸ್ಸು ಮತ್ತು ಶೌರ್ಯವನ್ನು ಸಂಕೇತಿಸುವ ಪ್ರಕಾಶ ಮಾನವಾದ ಸೂರ್ಯನನ್ನು, ಪವಿತ್ರ ಕೋವಿದರ ಮರವನ್ನು ಮತ್ತು ರಾಮರಾಜ್ಯದ ಆದರ್ಶಗಳನ್ನು ಮತ್ತು ರಾಷ್ಟ್ರದ ಏಕತೆಯನ್ನು ಪ್ರತಿನಿಧಿಸುವ 'ಓಂ' ಚಿಹ್ನೆಯನ್ನು ಒಳಗೊಂಡಿದೆ. ರಾಮಮಂದಿರದ ಶಿಖರವನ್ನು ಸಾಂಪ್ರದಾಯಿಕ ಉತ್ತರ ಭಾರತೀಯ ನಾಗರ ಶೈಲಿಯಲ್ಲಿ ನಿರ್ಮಿಸಲಾಗಿದೆ. ಹಾಗೇ, ಸುತ್ತಮುತ್ತಲಿನ 800 ಮೀಟರ್ ಸುತ್ತುವರಿದ ಪಾರ್ಕೋಟಾ ದಕ್ಷಿಣ ಭಾರತದ ವಾಸ್ತುಶಿಲ್ಪದ ಅಂಶಗಳನ್ನು ಪ್ರದರ್ಶಿಸುತ್ತದೆ. ಇದು ಭಾರತದ ವೈವಿಧ್ಯಮಯ ದೇವಾಲಯ ಸಂಪ್ರದಾಯಗಳ ಸಮ್ಮಿಲ ನವನ್ನು ಪ್ರತಿಬಿಂಬಿಸುತ್ತದೆ.

ಈ ಸಂಕೀರ್ಣವು ಮುಖ್ಯ ದೇವಾಲಯದ ಗೋಡೆಗಳ ಮೇಲೆ ವಾಲ್ಮೀಕಿ ರಾಮಾಯಣದ 87 ಸಂಕೀರ್ಣವಾಗಿ ಕೆತ್ತಿದ ಕಲ್ಲಿನ ಕಂತುಗಳು ಮತ್ತು ಆವರಣದ ಗೋಡೆಗಳ ಉದ್ದಕ್ಕೂ ಭಾರತೀಯ ಸಂಸ್ಕೃತಿಯ 79 ಕಂಚಿನ ಎರಕಹೊಯ್ದ ಕಂತುಗಳನ್ನು ಒಳಗೊಂಡಿದೆ. ಕೇಸರಿ ಧ್ವಜವನ್ನು ಹಾರಿಸುವುದು ಭಗವಾನ್ ಶ್ರೀ ರಾಮನ ಜೀವನ ಮತ್ತು ಬೋಧನೆಗಳನ್ನು ಆಚರಿಸುವ ಆಧ್ಯಾತ್ಮಿಕವಾಗಿ ಮತ್ತು ಸಾಂಸ್ಕೃತಿಕವಾಗಿ ಐತಿಹಾಸಿಕ ಕ್ಷಣವನ್ನು ಸೂಚಿಸುತ್ತದೆ

**ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:**
**9538786812 / 9880655634**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.